# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 46 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 31–08–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 46 | Title- Code: KARKAN 28269 | Chitradurga | Date: 31-08-2024 Saturday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸೆ.12 ರಂದು ಕರ್ನಾಟಕದ ಜಿಲ್ಲಾ ಕೇಂದ್ರದಲ್ಲಿ ತಮಟೆ ಚಳುವಳಿ 2

ಚಿತ್ರದುರ್ಗ ಕ್ಷೇತ್ರದ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ: ಸಂಸದ ಗೋವಿಂದ ಕಾರಜೋಳ 3

ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿ ಬೆಳಸಿಕೊಳ್ಳುವುದು ಅಗತ್ಯ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಉತ್ತಮ ಕ್ರೀಡಾಪಟುಗಳಿಗೆ ಸರ್ಕಾರದಿಂದ ಸೂಕ್ತ ಸ್ಥಾನಮಾನ ಕಲ್ಪಿಸುವ ಬಗ್ಗೆ ಚಿಂತನೆ: ರಘುಮೂರ್ತಿ

» ಚಳ್ಳಕೆರೆ

ಇತ್ತೀಚಿನ ದಿನಗಳಲ್ಲಿ ಕ್ರೀಡಾ ಕ್ಷೇತ್ರಗಳಲ್ಲಿ ನಿರೀಕ್ಷೆಗೂ ಮೀರಿದ ಯಶಸ್ಸನ್ನು ಕ್ರೀಡಾಪಟುಗಳು ಸಾಧಿಸುತ್ತಿದ್ದಾರೆ. ಕ್ರೀಡಾಕ್ಷೇತ್ರ ಇಂದು ಎಲ್ಲರ ಮೆಚ್ಚಿನ ತಾಣವಾಗಿದೆ. ಪ್ರತಿಯೊಂದು ಕ್ರೀಡೆ ತನ್ನದೇಯಾದ ವಿಶೇಷ ಮೌಲ್ಯವನ್ನು ಹೊಂದಿದೆ. ನಗರ ಹಾಗೂ ಗ್ರಾಮೀಣ ಮಟ್ಟದಲ್ಲಿ ಹೆಚ್ಚು ಕ್ರೀಡೆಗಳು ನಡೆಯಬೇಕಿದೆ. ಸರ್ಕಾರವೂ ಸಹ ಉತ್ತಮ ಕ್ರೀಡಾಪಟುಗಳಿಗೆ ಸೂಕ್ತಸ್ಥಾನಮಾನ ನೀಡಬೇಕೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶುಕ್ರವಾರ ನಗರದ ಎಚ್‌ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಡಿ.ಸುಧಾಕರ್ ಕ್ರೀಡಾಂಗಣದಲ್ಲಿ ತಾಲ್ಲೂಕು ಮಟ್ಟದ ಪದವಿಪೂರ್ವ ಕಾಲೇಜುಗಳ–2024–25ನೇ ಸಾಲಿನ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರು. ಪ್ರತಿವರ್ಷ ತಾಲ್ಲೂಕು ಮಟ್ಟದ ಪದವಿಪೂರ್ವ ಕಾಲೇಜಿನ ಕ್ರೀಡಾಕೂಟ ಆಯೋಜಿಸುವ ಮೂಲಕ ಅನೇಕ ಕ್ರೀಡಾಪಟುಗಳ ಸಾಧನೆಯನ್ನು ಪ್ರದರ್ಶಿಸಲು ಕಾಲೇಜು ಶಿಕ್ಷಣ ಇಲಾಖೆ ಅವಕಾಶ ಮಾಡಿಕೊಟ್ಟಿದೆ. ಕೇವಲ ತಾಲ್ಲೂಕು ಮಟ್ಟವಲ್ಲದೆ, ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲೂ ಚಳ್ಳಕೆರೆ ಕ್ರೀಡಾಪಟುಗಳು ತಮ್ಮ ಸಾಧನೆಯ ಮೂಲಕ ಎಲ್ಲರ ವಿಶ್ವಾಸ, ಗೌರವಗಳಿಸಲಿ ಎಂದರು.



ಕಾರ್ಯಕ್ರಮವನ್ನು ಶಾಲಾ ಶಿಕ್ಷಣ ಇಲಾಖೆ(ಪದವಿಪೂರ್ವ), ಚಿತ್ರದುರ್ಗ ಶ್ರೀಶಾರದಾ ಶಾಲಾ ಶಿಕ್ಷಣ ಸಂಸ್ಥೆ, ಬಿ.ಸೀತಾರಾಮಶಾಸ್ತ್ರಿ ಪದವಿಪೂರ್ವಕಾಲೇಜು, ಡಾ.ಎಸ್. ರಾಧಕೃಷ್ಣ ಎಜುಕೇಷನ್ ಸೊಸೈಟಿ, ಎಸ್‌ಎಲ್‌ಕೆಎಚ್‌ಆರ್ ಪದವಿಪೂರ್ವ ಕಾಲೇಜು ನಾರಾಯಣಪುರ ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದ್ದು,

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜು ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಟ್ಟಸ್ವಾಮಿ ಮಾತನಾಡಿ, ತಾಲ್ಲೂಕು ಮಟ್ಟದ ಕ್ರೀಡಾಕೂಟವನ್ನು ಕ್ಷೇತ್ರದ ಜನಪ್ರಿಯ ಶಾಸಕರು ಉದ್ಘಾಟಿಸಿ ಶುಭಹಾರೈಸಿದ್ದಾರೆ. ಪದವಿಪೂರ್ವ ಶಿಕ್ಷಣ ಇಲಾಖೆ ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಪ್ರಾತಿನಿತ್ಯವನ್ನು ನೀಡುತ್ತಾ ಬಂದಿದೆ. ಪ್ರತಿವರ್ಷ ನಡೆಯುವ ತಾಲ್ಲೂಕು ಮಟ್ಟದ ಕ್ರೀಡಾಕೂಟದಲ್ಲಿ ವಿವಿಧ ಆಟಗಳಲ್ಲಿ ಹೊಸ, ಹೊಸ ಕ್ರೀಡಾಪಟುಗಳನ್ನು ಹುಡುಕಿ ಅವರಿಗೆ ತರಬೇತಿ ಕೊಡುವ ಕಾರ್ಯವನ್ನು ರೂಪಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷ ಓ.ಸುಜಾತ, ಸದಸ್ಯರಾದ ಎಂ.ಜೆ.ರಾಘವೇಂದ್ರ, ಬಿ.ಟಿ.ರಮೇಶ್‌ಗೌಡ, ಪ್ರಾಂಶುಪಾಲರ ಸಂಘದ ಅಧ್ಯಕ್ಷ ದೇವೇಂದ್ರಪ್ಪ, ಕಾರ್ಯದರ್ಶಿ ಮುಸ್ತಾಪ್, ತಿಮ್ಮಯ್ಯ, ಎಸ್.ರಾಮಕೃಷ್ಣ, ಅಶೋಕ್‌ಬಾಬು, ಪರಶುರಾಮಪುರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶಶಿಧರ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಹಾವಳಿ: ರು.27 ಲಕ್ಷ ಚಿನ್ನಾಭರಣ ಕಳವು




» ಚಳ್ಳಕೆರೆ

ನಗರದ ಹೃದಯಭಾಗದಲ್ಲಿರುವ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣ ಕಳ್ಳಕಾಕರ ಹಾಟ್‌ಸ್ಪಾಟಾಗಿ ಪರಿವರ್ತನೆಯಾಗಿದೆ. ರಾಯದುರ್ಗದ ಟಿ.ಚೂಡಾಮಣಿ(49) ಎಂಬ ಮಹಿಳೆ ಚಳ್ಳಕೆರೆಯಿಂದ ರಾಯದುರ್ಗಕ್ಕೆ ಪ್ರಯಾಣಿಸಲು ಆ.29ರ ಗುರುವಾರ ಮಧ್ಯಾಹ್ನ 2.30ಕ್ಕೆ ಬಸ್ ನಿಲ್ದಾಣಕ್ಕೆ ಬಂದಿದ್ದು, ಕೆಲವೇ ಹೊತ್ತಲ್ಲಿ ಬಸ್ ಆಗಮಿಸಿದೆ. ಜನಜಂಗುಳಿಯ ಮಧ್ಯದಲ್ಲೇ ಬಸ್ ಹತ್ತಿದ ಮಹಿಳೆ ವ್ಯಾನಿಟಿಬ್ಯಾಗ್‌ನ ಜೀಪ್ ಓಪನ್ ಆಗಿದ್ದನ್ನು ಕಂಡು ಗಾಬರಿಯಾಗಿದ್ದಾಳೆ. ಕೂಡಲೇ ಕೂಗಿಕೊಂಡಾಗ ಸಾರ್ವಜನಿಕರು ಈಕೆಯ ನೆರವಿಗೆ ದಾವಿಸಿದ್ದಾರೆ. ಕೂಡಲೇ ಪೊಲೀಸ್ ಠಾಣೆಗೆ ತೆರಳಿ ದೂರು ನೀಡಲಾಗಿದೆ. ವ್ಯಾನಿಟಿಬ್ಯಾಗ್‌ನಲ್ಲಿದ್ದ 90 ಸಾವಿರ ಮೌಲ್ಯದ ಬಂಗಾರದ ಬಳೆ, 60 ಸಾವಿರ ಹರಳಿನ ಬಳೆ, 25 ಸಾವಿರ ಮೌಲ್ಯದ ಉಂಗುರ, 15 ಸಾವಿರ ಮೌಲ್ಯದ ಕಿವಿಓಲೆ, 5 ಸಾವಿರ ಮೌಲ್ಯದ ರಿಂಗ್, 15 ಸಾವಿರ ಮೌಲ್ಯದ ಬಂಗಾರದ ಜುಮುಕಿ, 20 ಸಾವಿರ ಮೌಲ್ಯ ಗುಂಡಿನ ಸರ, 40 ಸಾವಿರ ಬ್ರಾಸ್‌ಲೇಟ್ ಸೇರಿದಂತೆ ಒಟ್ಟು 27 ಲಕ್ಷದ 87 ಗ್ರಾಂ ಬಂಗಾರದ ಆಭರಣ ಕಳ್ಳತನವಾಗಿದೆ. ಠಾಣಾಧಿಕಾರಿ ಶ್ರೀನಿವಾಸ್ ಪ್ರಕರಣ ದಾಖಲಿಸಿದ್ದಾರೆ.

# ರೋವರ್ಸ್, ಎನ್‌ಎಸ್‌ಎಸ್ ಘಟಕಗಳ ಉದ್ಘಾಟನೆ

» ಚಿತ್ರದುರ್ಗ

ಚಿತ್ರದುರ್ಗ ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಶುಕ್ರವಾರ ಕ್ರೀಡಾ, ಸಾಂಸ್ಕೃತಿಕ, ರೋವರ್ಸ್, ಎನ್‌ಎಸ್‌ಎಸ್ ಘಟಕಗಳ ಉದ್ಘಾಟನೆ ಹಾಗೂ ಪ್ರತಿಭಾ ಪುರಸ್ಕಾರ ಸಮಾರಂಭಕ್ಕೆ ಚಾಲನೆ ನೀಡಲಾಯಿತು.

ಕೆಡಿಪಿ ಸದಸ್ಯ ಕೆ.ಸಿ.ನಾಗರಾಜ್ ಮಾತನಾಡಿ, ಸರ್ಕಾರಿ ಶಾಲೆಗಳಲ್ಲಿ ಓದಿದ ಅನೇಕರು ಇಂದು ಉನ್ನತ ಸ್ಥಾನಮಾನದಲ್ಲಿದ್ದಾರೆ. ಅದಕ್ಕೆ ಕಾರಣ ಛಲ–ಗುರಿ. ನೀವು ಕೂಡ ಅವರ ಹಾದಿಯಲ್ಲಿ ಸಾಗಲು ಕಲಿಕೆಯಲ್ಲಿ ಕಠಿಣ ಅಭ್ಯಾಸದಲ್ಲಿ ತೊಡಗಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.ಇದೇ ಸಂದರ್ಭಧಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಗಣ್ಯರು ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಿದರು. ಕೆಲ ವಿದ್ಯಾರ್ಥಿಗಳು ತಮ್ಮ ಅನಿಸಿಕೆ ಹಂಚಿಕೊಂಡರು.



ಕಾರ್ಯಕ್ರಮದಲ್ಲಿ ಪ್ರಾಂಶುಪಾಲ ಹೆಚ್.ಬಿ.ನರಸಿಂಹಮೂರ್ತಿ, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಆರ್.ಮಂಜುನಾಥ್, ನಿವೃತ್ತ ಉಪನ್ಯಾಸಕ ಎನ್.ನರಸಿಂಹಮೂರ್ತಿ, ಹಿರಿಯ ಉಪನ್ಯಾಸಕ ಪ್ರೊ.ಬಿ.ಕೃಷ್ಣಪ್ಪ, ನಿವೃತ್ತ ಉಪನ್ಯಾಸಕಿ ಶೈಲಾ ಜಯಕುಮಾರ್, ಬಿ.ಆರ್.ಶಿವಕುಮಾರ್, ಮಹೇಶಬಾಬು, ದೇವೇಂದ್ರಪ್ಪ, ಡಾ.ಹೇಮಂತರಾಜ್, ನಗರಸಭೆ ಮಾಜಿ ಸದಸ್ಯ ಎಸ್.ಶ್ರೀರಾಮ್, ಶ್ರೀನಿವಾಸ್, ಕಾಲೇಜಿನ ಉಪನ್ಯಾಸಕರಾದ ಚನ್ನಬಸಪ್ಪ, ದೊಡ್ಡಯ್ಯ, ಡಾ.ಗುರುನಾಥ್ ಹಾಗೂ ವಿದ್ಯಾರ್ಥಿಗಳು ಇದ್ದರು.

## ಸಂಸದ ಕಚೇರಿ ಜನರ ಸಮಸ್ಯೆಗಳಿಗೆ ಪರಿಹಾರ ಕೇಂದ್ರವಾಗಲಿ: ಸ್ವಾಮೀಜಿ



» ಚಿತ್ರದುರ್ಗ

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸದಸ್ಯರಾದ ಗೋವಿಂದ ಕಾರಜೋಳ ರವರು ಈಗ ಪ್ರಾರಂಭ ಮಾಡಿರುವ ಕಾರ್ಯಾಲಯ ನೊಂದ ಜನರ ಸಮಸ್ಯೆಗಳನ್ನು ಪರಿಹಾರ ಮಾಡುವ ಕೇಂದ್ರವಾಗಲಿ ಎಂದು ಚಿತ್ರದುರ್ಗ ಜಿಲ್ಲೆಯ ವಿವಿಧ ಮಠಾಧೀಶರು ಹಾರೈಸಿದ್ದಾರೆ.

ಚಿತ್ರದುರ್ಗನಗರದಜೆಸಿಆರ್‌ಬಡಾವಣೆಯಲ್ಲಿಶುಕ್ರವಾರನೂತನವಾಗಿ ಪ್ರಾರಂಭವಾದ ಸಂಸದರ ಜನ ಸಂಪರ್ಕ ಕಾರ್ಯಾಲಯಕ್ಕೆ ಬೇಟಿ ನೀಡಿ ಸಂಸದರಿಂದ ಸನ್ಮಾನಗೊಂಡು ಮಾತನಾಡಿದ ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಶ್ರೀಗಳು, ಸಂಸರು ಚಿತ್ರದುರ್ಗ ಜಿಲ್ಲೆಯ ಎಲ್ಲಾ ಮಠಾಧೀಶರನ್ನು ತಮ್ಮ ಕಛೇರಿ ಉದ್ಘಾಟನೆಗೆ ಕರೆಯಿಸಿರುವುದು ಬಸವಣ್ಣರವರ ಅನುಭವ ಮಂಟಪವನ್ನು ಹೋಲುತ್ತಿದೆ.

## ಪ್ರಮುಖ ಸುದ್ದಿ

# ಸಂಬಳದಲ್ಲಿ ದುಡ್ಡಲ್ಲಿ ಸ್ಮಾರ್ಟ್‌ಕ್ಲಾಸ್, ಸುಣ್ಣಬಣ್ಣಜತೆ ಸಿಸಿ ಕ್ಯಾಮೆರಾ ಅಳವಡಿಸಿದ ಟಿ.ಎನ್.ಕೋಟೆಯ ಸರ್ಕಾರಿ ಶಾಲೆಯ ಶಿಕ್ಷಕ ರಂಗಣ್ಣ

» ಮಹದೇವಪುರ ಶಿವಮೂರ್ತಿ.

ಪರಶುರಾಂಪುರ: ಗ್ರಾಮೀಣದಗಡಿ ಭಾಗದ ಸರ್ಕಾರಿ ಶಾಲೆಗಳಿಗೆ ಶಿಕ್ಷಕರು ಬರುವುದ 'ಕಷ್ಟಅಂತದ್ರಲ್ಲಿಇಲ್ಲೊಬ್ಬಶಿಕ್ಷಕ ಶಾಲೆಗಾಗಿ ಸ್ವಂತ ಹಣಖರ್ಚು ಸ್ಮಾರ್ಟ್‌ಕ್ಲಾಸ್ ನಲ್ಲಿ ಪಾಠ ಕೇಳುವಂತೆ ಮಾಡಿದ್ದಾರೆ.







ಪರಶುರಾಂಪುರ ಹೋಬಳಿಯ ಟಿ.ಎನ್‌ಕೋಟೆಗ್ರಾಮದ ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ರಂಗಣ್ಣಅವರು ಸಂಬಳದ ಹಣದಲ್ಲಿ ಒಂದು ಲಕ್ಷಕ್ಕೂಅಧಿಕಖರ್ಚು ಮಾಡಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವಉದ್ದೇಶದಿಂದ ಅಧಿಕಾರಿಗಳ, ಶಾಲಾಭಿವೃದ್ಧಿ ಸಮಿತಿ, ಸ್ಥಳೀಯರ ಸಹಕಾರದಿಂದ ಶಾಲೆಗೆ ಸುಣ್ಣ ಬಣ್ಣಜತೆ ತರಗತಿಗಳನ್ನು ಸ್ಮಾರ್ಟ್‌ಕ್ಲಾಸ್‌ಜತೆ ಸಿಸಿ ಕ್ಯಾಮರಾ ಅಳವಡಿಸಿ ಎಲ್ಲರ ಗಮನ ಸೆಳೆದಿದ್ದಾರೆ. ಶಿಕ್ಷಣ ಸಂಸ್ಥೆಯನ್ನಕಟ್ಟುವಕನಸನ್ನು ಬಿಟ್ಟುಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗಾಗಿ ಕರ್ತವ್ಯ ನಿರ್ವಹಿಸುವ ಶಾಲೆಯಲ್ಲಿ ಭೋದನೆ ಕಲಿಕೆಗೆ ತರಗತಿಗಳನ್ನ ಸ್ಮಾರ್ಟ್‌ಕ್ಲಾಸ್ ನೊಂದಿಗೆ ಹೈಟೆಕ್ ಸ್ಪರ್ಶ ನೀಡಿದ್ದಾರೆ.ಪ್ರಸ್ತುತ ಶಾಲೆಯಲ್ಲಿ 90 ವಿದ್ಯಾರ್ಥಿಗಳು ಕಲಿಯುತ್ತಿದ್ದಾರೆ.

**ನಮ್ಮಜನ ವಿಶೇಷ**

ಇಂಗ್ಲೀಷ್, ಹಿಂದಿ,ಗಣಿತ,ವಿಜ್ಞಾನ ವಿಷಯಗಳಿಗೆ ಖಾಯಂ ಶಿಕ್ಷಕರು ಇದ್ದು. ಇನ್ನೂಳಿದ ವಿಷಯಗಳಿಗೆ ಅತಿಥಿ ಶಿಕ್ಷಕರನ್ನು ನಿಯೋಜಿಸಲಾಗಿದೆ.

ಶಾಲಾ ಕಟ್ಟಡಕ್ಕೆರೈಲು ಬೋಗಿ ಚಿತ್ರ,ಶಾಲಾ ಕೋಠಡಿಯಲ್ಲಿ ಸಾಧಕರ ಪರಿಚಯಜತೆ ಸಾಹಿತ್ಯ,ಜಾನಪದ,ಭೂಪಟಗಳ ಪರಿಚಯದ ಮಾಹಿತಿ ಒಳಗೊಂಡಿದೆ.ಮಕ್ಕಳು ಓದಿ ಬರೆಯುವಅಥವಾ ಶಿಕ್ಷಕರು ಬಾಯಿಯಿಂದ ಮಾಡುವ ಪಾಠಕ್ಕಿಂತ ಹೆಚ್ಚಿನ ಪರಿಣಾಮ ಈ ಸ್ಮಾರ್ಟ್‌ಕ್ಲಾಸ್ ನಿಂದಆಗುತ್ತಿದೆ.ಶಾಲೆಯಲ್ಲಿ ಬರೀ ಪುಸ್ತಕ ಹಿಡಿದು ಪಾಠ ಮಾಡೋಲ್ಲ. ಅಂತರ್ಜಾಲದ ಮೂಲಕ ಪಾಠಕ್ಕೆ ಸಂಬಂಧಿಸಿದವಿಷಯಗಳನ್ನ ಸ್ಕ್ರೀನ್ ಮೇಲೆ ತೋರಿಸಿ ಭೋದನೆ ಮಾಡಲಾಗುತ್ತಿದೆ. ಮಕ್ಕಳು ಉತ್ಸಾಹದಿಂದಕಲಿಯುತ್ತಿದ್ದಾರೆ. ಕನ್ನಡ, ಇಂಗ್ಲಿಷ್,ಸಮಾಜ ವಿಜ್ಞಾನ, ಹಿಂದಿ, ವಿಜ್ಞಾನ,ಗಣಿತ ಸೇರಿದಂತೆ ಸಾಮಾನ್ಯಜ್ಞಾನ, ವ್ಯಕ್ತಿತ್ವ ವಿಕಸನ,ಯೋಗ,ಪರಿಸರ ಸಂರಕ್ಷಣೆ ವಿಷಯಗಳನ್ನ ಕಲಿಸಲಾಗುತ್ತಿದೆ. ಮುಖ್ಯ ಶಿಕ್ಷಕರ ವಿನೂತನಕಾರ್ಯಕ್ಕೆ ವ್ಯಾಪಕ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ನಮ್ಮ ಶಾಲೆಯಲ್ಲಿ ವಿವಿಧ ಭಾಷಾ ಪ್ರಯೋಗಾಲಯ ಸ್ಥಾಪಿಸುವ ಮಹದಾಸೆಯಿಂದಇದಕ್ಕೆ ಹಳೆಯ ವಿದ್ಯಾರ್ಥಿಗಳ, ದಾನಿಗಳು ಸಹಕಾರ ಬೇಕಿದೆ. ಸರ್ಕಾರಿ ಶಿಕ್ಷಕ ಎಂಬುದು ನನಗೆ ಹೆಮ್ಮೆಇದೆ.ಕೈಲಾದಷ್ಟುಕೈಲಾದ ಕಾರ್ಯಗಳನ್ನ ಮಾಡುತ್ತೇನೆ.ಇಲಾಖೆ,ಎಸ್ಡಿಎಂಸಿ, ಜನಪ್ರತಿನಿಧಿಗಳ, ಸಹಾ ಶಿಕ್ಷಕರ ಸಹಕಾರ ಪ್ರೇರಣೆಯಿಂದ ಶೈಕ್ಷಣಿಕಅಭಿವೃದ್ಧಿಗೆ ಪ್ರಯತ್ನಿಸಲಾಗುತ್ತಿದೆಎಂದು ಶಿಕ್ಷಕ ರಂಗಣ್ಣ ತಿಳಿಸುವರು. ಸ್ಮಾರ್ಟ್‌ಕ್ಲಾಸ್‌ಉದ್ಘಾಟನೆ: ಶಿಕ್ಷಕರಲ್ಲಿ ಬದ್ದತೆಇದ್ದರೆ ಏನು ಬೇಕಾದರೂ ಸಾಧಿಸಬಹುದುಎಂಬುದಕ್ಕೆ ಈ ಮುಖ್ಯ ಶಿಕ್ಷಕ ಜತೆ ಸಿಬ್ಬಂದಿ ಹಾಗೂ ಎಲ್ಲರ ಸಹಕಾರದೊಂದಿಗೆ ಸಾಧ್ಯವಾಗಿದೆಎಂದು ಬಿಇಓ ಕೆ.ಎಸ್ ಸುರೇಶ್ ತಿಳಿಸಿದರು.ಈ ವೇಳೆಯಲ್ಲಿ ಅಕ್ಷರದಾಸೋಹದ ಮಂಜುನಾಥ್, ಎಸ್ಡಿಎಂಸಿ ಅದ‍್ಯಕ್ಷರಂಗಸ್ವಾಮಿ,ಗ್ರಾಪಂಉಪಾಧ್ಯಕ್ಷೆ ಮಾಲತಿ, ಸದಸ್ಯಚಂದ್ರಣ್ಣ, ಶ್ರೀಧರ,ರೂಪ ಹಾಗೂ ಇನ್ನಿತರರು ಉಪಸ್ಥಿತರಿದ್ದರು.



> ಬದಲಾಗುತ್ತಿರುವ ವೈಜ್ಞಾನಿಕ ಜೀವನಕ್ಕೆ ತಕ್ಕಂತೆ ವಿದ್ಯಾರ್ಥಿಗಳ ಶೈಕ್ಷಣಿಕ ಬಲವರ್ಧನೆಗೆ ಎಲ್ಲರೂ ಶ್ರಮಿಸಬೇಕಿದೆ.
>
> » ಸುರೇಶ್ ಬಿಇಓ

> ನಾನೊಂದು ಶಿಕ್ಷಣ ಸಂಸ್ಥೆಗಳನ್ನ ಕಟ್ಟುವ ಮಹಾದಾಸೆಇತ್ತು.ಆದರೆಇತ್ತೀಚೆಗೆಗ್ರಾಮೀಣ ಭಾಗದ ಶಾಲೆಗಳು ವಿದ್ಯಾರ್ಥಿಗಳು ಇಲ್ಲದೆ ಮುಚ್ಚುವ ಹಂತದಲ್ಲಿಇರುವುದರಿಂದಗ್ರಾಮೀಣ ಶಾಲೆಗಳಲ್ಲಿ ಹೈಟೆಕ್ ಸ್ಮಾರ್ಟ್ ತರಗತಿಗಳಲ್ಲಿ ಭೋಧನೆ ಮೂಲಕ ಕಲಿಸಿ ನಮ್ಮ ಶಾಲೆ ನಮ್ಮ ಹೆಮ್ಮೆಯ ಓದಿಗೆ ಎಲ್ಲರ ಸಹಕಾರದೊಂದಿಗೆಗಡಿ ಭಾಗದ ಶಾಲೆಗಳನ್ನ ಉಳಿಸುವ ಸಣ್ಣ ಪ್ರಯತ್ನ.
>
> » ರಂಗಣ್ಣ ಮುಖ್ಯ ಶಿಕ್ಷಕ ಟಿ.ಎನ್‌ಕೋಟೆ

## ಫಾಸ್ಟ್ ನ್ಯೂಸ್

### ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರ

» ಚಿತ್ರದುರ್ಗ

ಬಸವೇಶ್ವರ ಪುನರ್‌ಜ್ಯೋತಿ ಐ ಬ್ಯಾಂಕ್, ಚಿತ್ರದುರ್ಗ ರೋಟರಿ ಕ್ಲಬ್, ಚಿತ್ರದುರ್ಗ ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಹಾಗೂ ಸಂಶೋಧನ ಕೇಂದ್ರ, ಚಿತ್ರದುರ್ಗ ಇವರುಗಳ ಸಂಯುಕ್ತಾಶ್ರಯದಲ್ಲಿ 39 ನೇ ರಾಷ್ಟ್ರೀಯ ನೇತ್ರದಾನದ ಪಾಕ್ಷಿಕದ ಅಂಗವಾಗಿ ಉಚಿತ ನೇತ್ರ ತಪಾಸಣೆ ಹಾಗೂ ಶಸ್ತ್ರ ಚಿಕಿತ್ಸಾ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಿಬಿರದ ಸಂಚಾಲಕರಾದ ರೋ. ಎಸ್. ವಿರೇಶ್ ತಿಳಿಸಿದ್ದಾರೆ. ಶಿಬಿರವು ಸೆ.2 ನೇ ಸೋಮವಾರ ಬೆಳಗ್ಗೆ 10.30 ರಿಂದ 4.00 ಗಂಟೆಯವರಿಗೆ ನಗರದ ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಹಾಗೂ ಸಂಶೋಧನ ಕೇಂದ್ರದಲ್ಲಿ ಶಿಬಿರ ನಡೆಯಲಿದ್ದು ಇದರಲ್ಲಿ ನುರಿತ ನೇತ್ರ ತಜ್ಞರುಗಳಿಂದ ತಪಾಸಣೆ ನಡೆಸಿ ಅವಶ್ಯಕತೆ ಇರುವವರಿಗೆ ಶಸ್ತ್ರ ಚಿಕಿತ್ಸೆ ಮಾಡಲಾಗುವುದು. ಅರ್ಹ ಫಲಾನುಭವಿಗಳಿಗೆ ಐಓಐ ಲೆನ್ಸ್‌ಗಳನ್ನು ಅಳವಡಿಸಲಾಗುವುದು. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳಲು ಶಿಬಿರದ ಸಂಚಾಲಕರಾದ ರೋ ಎಸ್. ವೀರೇಶ್ ವಿನಂತಿಸುತ್ತಾರೆರೋಗಿಗಳು ತಲೆಸ್ನಾನ ಮಾಡಿ, ಗಂಡಸರು ಮುಖ ಕ್ಷೌರ ಮಾಡಿಸಿಕೊಂಡು ಶುಭ್ರವಾದ ಬಟ್ಟೆ ಧರಿಸಿ ಬರುವುದು.ರೋಗಿಗಳು ಒಬ್ಬ ಸಹಾಯಕರನ್ನು ಜೊತೆಗೆ ಕರೆತರುವುದು ವೈದ್ಯರು ನೀಡುವ ಸಲಹೆ ಮತ್ತು ಸೂಚನೆಗಳನ್ನು ತಪ್ಪದೆ ಪಾಲಿಸುವುದು ಅಗತ್ಯವಾಗಿದೆ. ಕ್ಯಾಂಪಿಗೆ ಬರುವ ರೋಗಿಗಳು ಯಾವುದಾದರು ಒಂದು ಗುರುತಿನ ಚೀಟಿಯ ಜೆರಾಕ್ಸ್ ಕಡ್ಡಾಯವಾಗಿ ತರಬೇಕಿದೆ. ಹೆಚ್ಚಿನ ಮಾಹಿತಿಗಾಗಿ ಬಸವೇಶ್ವರ ಪುನರ್‌ಜ್ಯೋತಿ ಐ ಬ್ಯಾಂಕ್‌ನ ಅಧ್ಯಕ್ಷರಾದ ಪಿ.ಬಿ. ಶಿವರಾಂ, ಶಿಬಿರದ ಸಂಚಾಲಕರಾದ ಎಸ್. ವೀರೇಶ್ ಕಾರ್ಯದರ್ಶಿಗಳಾದ ಟಿ. ವೀರಭದ್ರಸ್ವಾಮಿ, ರೋಟರಿ ಕ್ಲಬ್‌ನ ಅಧ್ಯಕ್ಷರಾದ ರೋ ಜಿ.ಎನ್. ವೀರಣ್ಣ, ಕಾರ್ಯದರ್ಶಿ ರೋ ಶಿವಣ್ಣ ಕುರುಬರಹಳ್ಳಿ ಅಥವಾ 9448144871, 9448083139, 9945061637, 8497049144, 9845680919 ದೂರವಾಣಿಯನ್ನು ಸಂಪರ್ಕಿಸಬಹುದಾಗಿದೆ.

### ವಿದ್ಯುತ್ ಶಾರ್ಟ್ ಸರ್ಕ್ಯೂರ್ಟ್‌ಗೆ ಏಳು ಮೇಕೆಗಳು ಬಲಿ.



» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ಗೌಡಗೆರೆ ಗ್ರಾಮದಲ್ಲಿ ಶುಕ್ರವಾರ ಸಂಜೆ ನಡೆದ ಆಕಸ್ಮಿಕ ವಿದ್ಯುತ್ ಶಾರ್ಟ್‌ಸರ್ಕ್ಯೂರ್ಟ್‌ಗೆ ತಿಪ್ಪೇಸ್ವಾಮಿ ಎಂಬುವವರಿಗೆ ಸೇರಿದ 7 ಮೇಕೆಗಳು ಸ್ಥಳದಲ್ಲೇ ಮೃತಪಟ್ಟಿರುತ್ತವೆ. ಗ್ರಾಮದ ಮನೆಯ ಪಕ್ಕದ ಶೆಡ್‌ನಲ್ಲಿ ಕೂಡಿಹಾಕಿದ್ದ ಮೇಕೆಗಳನ್ನು ಸಾಕುತ್ತಿದ್ದ, ಶುಕ್ರವಾರ ಸಂಜೆ ವಿದ್ಯುತ್ ಶಾರ್ಟ್‌ಸರ್ಕ್ಯೂರ್ಟ್‌ನಿಂದ ಏಳು ಮೇಕೆಗಳು ಮೃತಪಟ್ಟಿರುತ್ತವೆ. ಕಂದಾಯ ಇಲಾಖೆ ಮತ್ತು ಪಶುಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಅಯ್ಯಪ್ಪಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಡಿ.ಡಿ. ವಿತರಣೆ



» ಚಿತ್ರದುರ್ಗ

ಶ್ರೀಕ್ಷೇತ್ರ ಧರ್ಮಸ್ಥಳದ ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗಡೆರವರು ತಾಲ್ಲೂಕಿನ ಕೂನಬೇವು ಗ್ರಾಮದಲ್ಲಿನ ಅಯ್ಯಪ್ಪಸ್ವಾಮಿ ದೇವಸ್ಥಾನದ ಜೀರ್ಣೋದ್ಧಾರಕ್ಕಾಗಿ ಮಂಜೂರು ಮಾಡಿರುವ ಒಂದು ಲಕ್ಷ ರೂ.ಗಳ ಡಿ.ಡಿ.ಯನ್ನು ತಾಲ್ಲೂಕು ಯೋಜನಾಧಿಕಾರಿ ಬಿ.ಅಶೋಕ್‌ರವರು ದೇವಸ್ಥಾನದ ಸಮಿತಿಯವರಿಗೆ ಹಸ್ತಾಂತರಿಸಿದರು. ಕೂನಬೇವು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಧನಂಜಯ್‌ರೆಡ್ಡಿ, ದೇವಸ್ಥಾನ ಕಮಿಟಿ ಅಧ್ಯಕ್ಷ ಶಂಕರಣ್ಣ, ವಲಯ ಮೇಲ್ವಿಚಾರಕ ಮಧು, ಸೇವಾ ಪ್ರತಿನಿಧಿ ಮತ್ತು ಗ್ರಾಮದ ಮುಖಂಡರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ

» ದಾವಣಗೆರೆ

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೆಪ್ಟೆಂಬರ್ 10 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಭೆಯನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಸೆ.12 ರಂದು ಜಿಲ್ಲಾ ಕೇಂದ್ರದಲ್ಲಿ ತಮಟೆ ಚಳುವಳಿ

» ಚಿತ್ರದುರ್ಗ

ಸುಪ್ರೀಂಕೋರ್ಟ್ ಹೊರಡಿಸಿರುವ ಐತಿಹಾಸಿಕ ಮಹತ್ವದ ತೀರ್ಪಿನನ್ವಯ ರಾಜ್ಯ ಸರ್ಕಾರ ಒಳ ಮೀಸಲಾತಿಯನ್ನು ಕೂಡಲೆ ಜಾರಿಗೊಳಿಸುವಂತೆ ಸೆ.12 ರಂದು ರಾಜ್ಯಾದ್ಯಂತ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ತಮಟೆ ಚಳುವಳಿ ನಡೆಸಿ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದೆಂದು ಪ್ರೊ.ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಸಂಚಾಲಕ ಗುರುಮೂರ್ತಿ ತಿಳಿಸಿದರು.



ಕ್ರೀಡಾ ಭವನದಲ್ಲಿ ಇತ್ತೀಚೆಗೆ ನಡೆದ ಕರ್ನಾಟಕ ದಲಿತ ಸಂಘರ್ಷ ಸಮಿತಿ ರಾಜ್ಯ ಪದಾಧಿಕಾರಿಗಳ ಸಭೆ ಉದ್ಘಾಟಿಸಿ ಮಾತನಾಡಿದರು.

1995 ರಲ್ಲಿ ಪ್ರೊ.ಬಿ.ಕೃಷ್ಣಪ್ಪ ಒಳ ಮೀಸಲಾತಿಗಾಗಿ ಮೊಟ್ಟ ಮೊದಲು ಧ್ವನಿ ಎತ್ತಿದರು. ಅಂದಿನಿಂದ ಇಂದಿನತನಕ ಹೋರಾಟ ನಡೆಯುತ್ತಲೆ ಇದೆ. ಪರಿಶಿಷ್ಟ ಜಾತಿಯಲ್ಲಿ ಉಪ ಜಾತಿಗಳಿಗೆ ಒಳ ಮೀಸಲಾತಿಯನ್ನು ಅನುಷ್ಠಾನಗೊಳಿಸಬೇಕೆಂದು ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಹೋರಾಟ ನಡೆಸಿ ಮಂತ್ರಿ ಮತ್ತು ಶಾಸಕರುಗಳಿಗೆ ಮನವರಿಕೆ ಮಾಡಿಕೊಡಬೇಕಿದೆ. ಮನೆ ಮನೆಗೆ ಕರಪತ್ರಗಳನ್ನು ವಿತರಿಸಿ ಒಳ ಮೀಸಲಾತಿ ಕುರಿತು ದಲಿತರನ್ನು ಜಾಗೃತಿಗೊಳಿಸೋಣ ಎಂದರು.ಆಂಧ್ರದಲ್ಲಿ ಚಿನ್ನಯ್ಯ 2005 ರಲ್ಲಿ ಒಳ ಮೀಸಲಾತಿಗಾಗಿ ಹೋರಾಟ ಆರಂಭಿಸಿ ನ್ಯಾಯಾಲಯಕ್ಕೆ ಮೊರೆ ಹೋದಾಗ ಅಂದಿನ ನ್ಯಾಯಾಧೀಶರಾಗಿದ್ದ ಸಂತೋಷ್ ಹೆಗ್ಡೆ ಸಂವಿಧಾನಬದ್ದವಾಗಿ ಪರಿಶಿಷ್ಟ ಜಾತಿಯಲ್ಲಿನ ಉಪ ಜಾತಿಗಳಿಗೆ ಮೀಸಲಾತಿ ನೀಡಲು ಅಧಿಕಾರವಿಲ್ಲದ ಕಾರಣ ರಾಜ್ಯ ಸರ್ಕಾರಕ್ಕೂ ಈ ಸಂಬಂಧ ಅಧಿಕಾರವಿರುವುದಿಲ್ಲ ಎಂದು ತೀರ್ಪು ನೀಡಿದರು. ಅಂದಿನಿಂದ ತಮಿಳುನಾಡು, ಪಂಜಾಬ್, ಕರ್ನಾಟಕ ಸೇರಿದಂತೆ ದೇಶದ ನಾನಾ ರಾಜ್ಯಗಳಲ್ಲಿ ಒಳ ಮೀಸಲಾತಿಗಾಗಿ ಹೋರಾಟ ಶುರುವಾಯಿತು ಎಂದು ಹೇಳಿದರು. ಒಳ ಮೀಸಲಾತಿಗೆ ಸಂಬಂಧಿಸಿದಂತೆ ಸುಪ್ರಿಂಕೋರ್ಟ್ ಪರಿಶಿಷ್ಟ ಜಾತಿಯಲ್ಲಿನ ಉಪ ಜಾತಿಗಳಿಗೆ ಒಳ ಮೀಸಲಾತಿ ಕೊಡುವ ಅಧಿಕಾರ ಆಯಾ ರಾಜ್ಯ ಸರ್ಕಾರಗಳಿಗಿದೆ ಎನ್ನುವ ಸಂವಿಧಾನಾತ್ಮಕ ತೀರ್ಪು ನೀಡಿರುವುದರಿಂದ ಮುಂದಿನ ತಿಂಗಳು ರಾಜ್ಯಾದ್ಯಂತ ತಮಟೆ ಚಳುವಳಿ ನಡೆಸಿ ಮೈಮರೆತು ಮಲಗಿರುವ ರಾಜ್ಯ ಸರ್ಕಾರವನ್ನು ಎಚ್ಚರಿಸಲಾಗುವುದು. ಎಂತಹುದೆ ಹೋರಾಟಕ್ಕೆ ದಲಿತರು ಸಿದ್ದರಿರಬೇಕೆಂದು ಗುರುಮೂರ್ತಿ ಕರೆ ನೀಡಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಕೆಂಗುಂಟೆ ಜಯಣ್ಣ ಮಾತನಾಡಿ ಕಳೆದ ಮೂವತ್ತು ವರ್ಷಗಳಿಂದಲೂ ಕರ್ನಾಟಕ ದಲಿತ ಸಂಘರ್ಷ ಸಮಿತಿ ಒಳ ಮೀಸಲಾತಿ ಜಾರಿಗಾಗಿ ಹೋರಾಟ ಮಾಡಿಕೊಂಡು ಬರುತ್ತಿದೆ. ಶತಶತಮಾನಗಳಿಂದಲೂ ಶೋಷಣೆ, ಹಿಂಸೆ, ದೌರ್ಜನ್ಯ, ಬಹಿಷ್ಕಾರವನ್ನು ಅನುಭವಿಸಿಕೊಂಡು ಬರುತ್ತಿರುವ ದಲಿತರು ಸಮಾಜದ ಮುಖ್ಯವಾಹಿನಿಗೆ ಬರಬೇಕಾಗಿರುವುದರಿಂದ ರಾಜ್ಯ ಸರ್ಕಾರ ವಿಳಂಭ ಮಾಡದೆ ಒಳ ಮೀಸಲಾತಿಯನ್ನು ಜಾರಿಗೆ ತರಬೇಕು. ಇಲ್ಲದಿದ್ದರೆ ಜನಪ್ರತಿನಿಧಿಗಳನ್ನು ತಡೆದು ಘೇರಾವ್ ಹಾಕಿ ಪ್ರತಿಭಟಿಸಲಾಗುವುದೆಂದು ಎಚ್ಚರಿಸಿದರು.

ವಿಜಯನಗರ ದಲಿತ ಸಂಘರ್ಷ ಸಮಿತಿ ಸಂಚಾಲಕ ಎಸ್.ದುರುಗೇಶ್ ಮಾತನಾಡುತ್ತ ಸರ್ಕಾರ ಸದಾಶಿವ ಆಯೋಗದ ವರದಿ, ಮಾಧುಸ್ವಾಮಿ ಆಯೋಗದ ವರದಿ ಇವೆರಡರಲ್ಲಿ ಯಾವುದನ್ನು ಜಾರಿ ಮಾಡುತ್ತದೋ ಎನ್ನುವ ಗೊಂದಲವಿದೆ. ಸದಾಶಿವ ಆಯೋಗದ ವರದಿಯನ್ನು ರಾಜ್ಯ ಸರ್ಕಾರ ತಿರಸ್ಕರಿಸಿ ಮಾಧುಸ್ವಾಮಿ ಆಯೋಗದ ವರದಿಯನ್ನು ಕೇಂದ್ರಕ್ಕೆ ಕಳಿಸಿದೆ. ಸುಪ್ರೀಂಕೋರ್ಟ್ ತೀರ್ಪಿನ ಪ್ರತಿ ಪಡೆದು ಅಂತಿಮ ತೀರ್ಪಿನ ಬಗ್ಗೆ ಶಿಬಿರ ಏರ್ಪಡಿಸಿ ಕಾನೂನು ತಜ್ಞರ ಜೊತೆ ಚರ್ಚಿಸಬೇಕೆಂದು ಸಭೆಯಲ್ಲಿ ಸಲಹೆ ನೀಡಿದರು.ಕರ್ನಾಟಕ ದಲಿತ ಸಂಘರ್ಷ ಸಮಿತಿ ಸಂಘಟನಾ ಸಂಚಾಲಕರುಗಳಾದ ಹನುಮಂತಪ್ಪ ಕಾಕರ್‌ಗಲ್, ಗಂಗಾಧರ ಚಿಕ್ಕಬಳ್ಳಾಪುರ, ರಮೇಶ್ ಮಾದರ್ ಬೆಳಗಾವಿ, ಬಸವರಾಜ್, ದಾವಣಗೆರೆ ಜಿಲ್ಲಾ ಸಂಚಾಲಕ ಕುಂದವಾಡ ಮಂಜುನಾಥ್, ಶಿವಮೊಗ್ಗ ಜಿಲ್ಲಾ ಸಂಚಾಲಕ ಎಂ.ಏಳುಕೋಟಿ, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ಹೇಮ, ಲಾವಣ್ಯ ವೇದಿಕೆಯಲ್ಲಿದ್ದರು.

# ರಾಷ್ಟ್ರೀಯ ಮಟ್ಟದ ಮದಕರಿ ಕಪ್ ಕಬ್ಬಡಿ ಪಂದ್ಯ

## ಪೋಸ್ಟರ್ ಬಿಡುಗಡೆಗೊಳಿಸಿದ ಭಗೀರಥ ಗುರುಪೀಠದ ಪುರುಷೋತ್ತಮಾನಂದಪುರಿ ಶ್ರೀ

» ಹೊಸದುರ್ಗ

ನಾಡದೊರೆ ರಾಜವೀರ ಮದಕರಿ ನಾಯಕರ ಜಯಂತೋತ್ಸವದ ಪ್ರಯುಕ್ತ ಮದಕರಿ ನಾಯಕ ಯುವ ಬ್ರಿಗೇಡ್ ವತಿಯಿಂದ ಬೆಂಗಳೂರಿನ ಚಾಮರಾಜಪೇಟೆಯ ರಾಜೀವ್ ಗಾಂಧಿ ಸ್ಪೋರ್ಟ್ಸ್ ಸ್ಟೇಡಿಯಂನಲ್ಲಿ ಅಕ್ಟೋಬರ್ 5 ಮತ್ತು 6 ರಂದು ನಡೆಯಲಿರುವ ರಾಷ್ಟ್ರೀಯ ಮಟ್ಟದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ "ಮದಕರಿ ಕಪ್" ಪೋಸ್ಟರನ್ನು ಬುಧವಾರ ಬ್ರಹ್ಮವಿದ್ಯಾನಗರದ ಭಗೀರಥ ಗುರುಪೀಠದ ಶ್ರೀ ಪುರುಷೋತ್ತಮಾನಂದಪುರಿ ಸ್ವಾಮೀಜಿ ಬಿಡುಗಡೆಗೊಳಿಸಿದರು.





ಪೋಸ್ಟರ್ ಬಿಡುಗಡೆಗೊಳಿಸಿ ಮಾತನಾಡಿದ ಶ್ರೀಗಳು, ತನ್ನ ಬದುಕಿನುದ್ದಕ್ಕೂ ಹುಲಿಯಂತೆ ಹೋರಾಡಿ ಶತ್ರುಗಳಿಂದಲೂ ಸೈ ಎನಿಸಿಕೊಂಡಿದ್ದ ಕನ್ನಡನಾಡಿನ ಹೆಮ್ಮೆಯ ಸುಪುತ್ರ, ನಾಡದೊರೆ ರಾಜವೀರ ಮದಕರಿ ನಾಯಕರ ಜಯಂತೋತ್ಸವದ ವಿಶೇಷವಾಗಿ ನಾಡಿನ ಮದಕರಿ ನಾಯಕರ ಎಲ್ಲಾ ಅಭಿಮಾನಿಗಳು ಒಂದುಗೂಡಿ, ಪಂದ್ಯಾವಳಿ ಆಯೋಜನೆ ಮಾಡಿರುವುದು ಸಂತಸದ ವಿಷಯ. ಕಬಡ್ಡಿ ಇದೊಂದು ದೇಶೀಯ ಕ್ರೀಡೆಯಾಗಿದೆ. ಇಂತಹ ಕ್ರೀಡಾ ಕಾರ್ಯಕ್ರಮಗಳ ಆಯೋಜನೆಯಿಂದ ಮದಕರಿ ನಾಯಕರಿಗೆ ಗೌರವ ಸಿಗುವುದರ ಜೊತೆಗೆ ಕ್ರೀಡಾಪಟುಗಳ ಪ್ರತಿಭೆಯನ್ನು ಗುರುತಿಸಿ,ಪ್ರೋತ್ಸಾಹಿಸಿದಂತಾಗುತ್ತದೆ. ನಾಡಿನ ಉತ್ಸಾಹಿ ಯುವಕರು ಬೆಂಗಳೂರಿನಲ್ಲಿ ನಡೆಯಲಿರುವ ಕ್ರೀಡೆಯಲ್ಲಿ ಭಾಗವಹಿಸಿ. ಕ್ರೀಡೆಯಲ್ಲಿ ಸೋಲು–ಗೆಲುವು ಇದ್ದೆ ಇರುತ್ತದೆ. ಅದನ್ನು ಆರೋಗ್ಯಕರವಾಗಿ ತೆಗೆದುಕೊಳ್ಳಿ. ಮದಕರಿ ಕಪ್ ಪಂದ್ಯಾವಳಿ ಯಶಸ್ವಿಯಾಗಿ ನಡೆಯಲಿ ಎಂದು ಶುಭಕೋರಿದರು.

ಈ ವೇಳೆ ಹೊಸದುರ್ಗ ಪುರಸಭೆಯ ನಾಮನಿರ್ದೇಶಿತ ಸದಸ್ಯ, ಹೊಸದುರ್ಗ ತಾಲ್ಲೂಕು ನಾಯಕ ಸಮಾಜದ ಉಪಾಧ್ಯಕ್ಷ ತಿಪ್ಪೇಸ್ವಾಮಿ, ಮುಖಂಡ ಕಿಟ್ಟದಹಳ್ಳಿ ಕೆಂಚಪ್ಪ ನಾಯಕ, ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ, ಹೊಸದುರ್ಗ ಯುವ ಘಟಕದ ಅರುಣ್, ವಸಂತ್, ಲೋಕೇಶ್, ಪ್ರಸನ್ನ, ಲೋಹಿತ್, ಪ್ರದೀಪ್ ಮತ್ತು ಸಿದ್ದೇಶ್ ಇದ್ದರು.

# ವಿಶ್ವ ಹಿಂದು ಪರಿಷದ್; ೬೦ನೇ ವರ್ಷ ಆಚರಣೆ

■ ಚಿತ್ರದುರ್ಗ

ವಿಶ್ವ ಹಿಂದು ಪರಿಷದ್ ಸ್ಥಾಪನ ದಿನ ಹಾಗೂ ಷಷ್ಠಿಪೂರ್ತಿ ಸಮಾರೋಪ ಸಂಭ್ರಮದ ಧಾರ್ಮಿಕ ಸಭಾ ಕಾರ್ಯಕ್ರಮ ಹಾಗೂ ಶ್ರೀಕೃಷ್ಣನ ವೇಷಭೂಷಣ ಕಾರ್ಯಕ್ರಮದ ಪ್ರಯುಕ್ತ ನಗರದ ಶ್ರೀ ಸದ್ಗುರು ಕಬೀರಾನಂದಾಶ್ರಮದ ಆವರಣ ಸೆ. 01ನೇ ಭಾನುವಾರ ಬೆಳಿಗ್ಗೆ 11ಕ್ಕೆ ನಡೆಯಲಿದೆ.



ಧರ್ಮೋ ರಕ್ಷತಿ ರಕ್ಷಿತ: ಅನ್ನುವ ಧ್ಯೆಯ ವಾಕ್ಯದೊಂದಿಗೆ 1964ರ ಶ್ರೀ ಕೃಷ್ಣ ಜನ್ಮಾಷ್ಠಮಿಯ ಪರ್ವ ಕಾಲದಲ್ಲಿಸ್ಥಾಪಿಸಲ್ಪಟ್ಟವಿಶ್ವಹಿಂದೂ ಪರಿಷದ್ ಈಗ ಷಷ್ಠಿಪೂರ್ತಿ ಸಂಭ್ರಮ, ಸಮಸ್ತ ಹಿಂದೂ ಸಮಾಜದ ಅಸಮಾನತೆಯ ಭಾವನೆ ತೊಲಗಿಸಿ ನಾವೆಲ್ಲ ಹಿಂದು ನಾವೆಲ್ಲ ಒಂದು ಎಂಬ ಭಾವನೆ ಮೂಡಿಸಿ ವಿಶ್ವದೆಲ್ಲೆಡೆ ಸನಾತನ ಧರ್ಮದ ಹಿರಿಮೆಯನ್ನು ಪಸರಿಸಿ, ಸಂರಕ್ಷಣೆಯನ್ನು ಮಾಡಿ ನಿರಂತರ ಸೇವೆ ಸಲ್ಲಿಸುತ್ತಿರುವ ಈ ಸಂಘಟನೆಯ 60ನೇ ವರ್ಷದ ಆಚರಣೆ ನಡೆಯಲಿದೆ.

ಕಾಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಕಬೀರಾನಂದ ಆಶ್ರಮದ ಶ್ರೀ ಶಿವಲಿಂಗಾನಂದ ಮಹಾಸ್ವಾಮಿಗಳು ವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಶ್ರೀ ಶಾರದ ಬ್ರಾಸ್ ಬ್ಯಾಂಡ್ನ ಹಿರಿಯ ಸಂಗೀತ ಕಲಾವಿದರಾದ ಎಸ್.ವಿ. ಗುರುಮೂರ್ತಿ ವಹಿಸಲಿದ್ದಾರೆ.

ಮುಖ್ಯ ಭಾಷಣಗಾರರಾಗಿ ಕರ್ನಾಟಕ ದಕ್ಷಿಣದ ಬಜರಂಗದಳದ ಪ್ರಾಂತ ಸಂಯೋಜಕರಾದ ಪ್ರಭಂಜನ್ ನೆರವೇರಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮಹಿಳಾ ಪೋಲೀಸ್ ಠಾಣೆಯ ಪೋಲೀಸ್ ಸಬ್ ಇನ್ಸ್ಪೆಕ್ಟರ್ ಶ್ರೀಮತಿ ಮಂಜುಳಮ್ಮ. ಯೋಗ ಆಚಾರ್ಯರು ಮತ್ತು ಚಿತ್ರದುರ್ಗ ಜಿಲ್ಲಾ ಯೋಗಾಸನ ಕ್ರೀಡಾ ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷರಾದ ಎಲ್. ಎಸ್. ಚಿನ್ಮಯಾನಂದ. ಟಾರ್ಗೆಟ್ ಯುವ ವೇದಿಕೆಯ ಅಧ್ಯಕ್ಷರಾದ ಸಿದ್ದರಾಜ್ ಜೋಗಿ, ವಿಗ್ರಹ ಶಿಲ್ಪಿಗಳಾದ ಕೀರ್ತಿ ನಂಜುಂಡಸ್ವಾಮಿ, ವಿಶ್ವ ಹಿಂದು ಪರಿಷದ್ನ ಚಿತ್ರದುರ್ಗ ನಗರ ಅಧ್ಯಕ್ಷರಾದ ಅಶೋಕ್ ಕುಮಾರ್ ಈ. ಭಾಗವಹಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಮಕ್ಕಳಿಗೆ ಕೃಷ್ಣನ ವೇಷಭೂಷಣವನ್ನು ಸಹಾ ಏರ್ಪಡಿಸಲಾಗಿದೆ. ಭಾಗವಹಿಸಿದ ಎಲ್ಲಾ ಮಕ್ಕಳಿಗೆ ವಿಶೇಷ ಬಹುಮಾನ ನೀಡಲಾಗುವುದು. ಹಿಂದು ಸಮಾಜವನ್ನು ಸದೃಡಗೊಳಿಸುವ ಈ ಕಾರ್ಯಕ್ರಮಕ್ಕೆ ತಮ್ಮೆಲ್ಲರ ಉಪಸ್ಥಿತಿಯನ್ನು ಅಧ್ಯಕ್ಷರು, ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳು ವಿಶ್ವ ಹಿಂದು ಪರಿಷದ್ ಬಯಸಿದ್ದಾರೆ.

### ಹಾಲು ಒಕ್ಕೂಟಕ್ಕೆ ಜಿ.ಬಿ.ಶೇಖರ್ ಆಯ್ಕೆ: ಸನ್ಮಾನ

» ಚಿತ್ರದುರ್ಗ

ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ ಹಾಲು ಒಕ್ಕೂಟಕ್ಕೆ ಕಳೆದ 14 ರಂದು ನಡೆದ ಚುನಾವಣೆಯಲ್ಲಿ ನಿರ್ದೇಶಕರಾಗಿ ಆಯ್ಕೆಯಾಗಿರುವ ಜಿ.ಬಿ.ಶೇಖರ್‌ಗೆ ಚಿತ್ರದುರ್ಗ ಜಿಲ್ಲಾ ಕ್ವಾರಿ ಮತ್ತು ಸ್ಟೋನ್ ಕ್ರಷರ್ಸ್ ಮಾಲೀಕರ ಅಸೋಸಿಯೇಷನ್‌ನಿಂದ ಸನ್ಮಾನಿಸಲಾಯಿತು. ಜಿಲ್ಲಾ ಕ್ವಾರಿ ಮತ್ತು ಸ್ಟೋನ್ ಕ್ರಷರ್ಸ್ ಮಾಲೀಕರ ಅಸೋಸಿಯೇಷನ್ ಅಧ್ಯಕ್ಷ ಅಬ್ದುಲ್ ಮಜೀದ್, ಸಂದೀಪ್, ನಗರಸಭೆ ಸದಸ್ಯ ವೆಂಕಟೇಶ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.



## ಪ್ರಮುಖ ಸುದ್ದಿ

# ಸಂಸದ ಕಚೇರಿ ಜನರ ಸಮಸ್ಯೆಗಳಿಗೆ ಪರಿಹಾರ ಕೇಂದ್ರವಾಗಲಿ

» ಮೊದಲ ಪುಟದಿಂದ

ಸಂಸದರು ಮಹಾತ್ಮರ ನಾಡಿನಿಂದ ಬಂದವರಾಗಿದ್ದಾರೆ, ಅವರಿಗೆ ಶರಣರ, ದಾರ್ಶನಿಕರ ಮಹತ್ವ ಗೊತ್ತು ಇದರಿಂದ ಅವರು ಕಚೇರಿ ಪ್ರಾರಂಭಕ್ಕೆ ಹರಗುರು ಚರಮೂರ್ತಿಗಳನ್ನು ಕರೆಸಿದ್ದಾರೆ. ರಾಜ್ಯದ ಚುನಾಯಿತ ಪ್ರತಿನಿಧಿಯಾಗಿ ಹಾಗೂ ಉಪ ಮುಖ್ಯಮಂತ್ರಿಗಳಾಗಿ ಅನೇಕ ಖಾತೆಗಳನ್ನು ಯಶಸ್ವಿಯಾಗಿ ನಿರ್ವಹಿಸಿದ್ದಾರೆ. ಅನುಭವ ಇದೆ ಇವರು ಐದು ವರ್ಷದ ಕಾರ್ಯಾವಾಧಿಯಲ್ಲಿ ಉತ್ತಮ ಕೆಲಸಗಳನ್ನು ಜಿಲ್ಲೆಗೆ ಆಗತ್ಯವಾಗಿ ಬೇಕಾದವುಗಳನ್ನು ಮಾಡಲಿ ನೀರು ಬೆಳಕು, ರಸ್ತೆ, ಇತರೆ ಕಾಮಗಾರಿಗಳನ್ನು ತುರ್ತಾಗಿ ಮಾಡಲಿ ಈಗ ಪ್ರಧಾನ ಮಂತ್ರಿಗಳು ದೇಶದ ನೆಚ್ಚಿನ ಮಗ ಎಂದು ಹೆಸರನ್ನು ಪಡೆದಿದ್ದಾರೋ ಅದೇ ರೀತಿ ಗೋವಿಂದ ಕಾರಜೋಳ ರವರು ಸಹಾ ಕರ್ನಾಟಕ ಲೋಕಸಬಾ ಕ್ಷೇತ್ರದ ನೆಚ್ಚಿನ ಸಂಸದರು ಎಂಬ ಹೆಸರನ್ನು ಪಡೆಯಲಿ ಎಂದರು. ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಶ್ರೀಗಳು ಮಾತನಾಡಿ, ಕಾರ್ಯಾಲಯ ಒಂದು ರೀತಿ ವೈದ್ಯಾಲಯ ಇದ್ದಂತೆ, ಜನ ಪ್ರತಿನಿಧಿಗಳು ಜನರ ವೈದ್ಯರಿದ್ದ ಹಾಗೇ, ಕಷ್ಟಗಳನ್ನು ಹೊತ್ತು ಬರುವಂತರಿಗೆ ಪರಿಹಾರವನ್ನು ನೀಡುವ ಕೇಂದ್ರವಾಗಬೇಕಿದೆ. ನೊಂದವರ ಬಂಧುಗಳಾಗಿ, ಸಂಕಷ್ಟಗಳನ್ನು ಸಂತೈಸುವ ಮಹಾಂತರಾಗಿ ಜನರ ಭವಣೆಗಳನ್ನು ಬಗೆಹರಿಸುವ ದೇವಾಲಯವಾಗಲಿ,



ಸಂಸದರು ಈ ಹಿಂದೆ ಗೆದ್ದ ಕ್ಷೇತ್ರಗಳೆಲ್ಲಾ ಅಭಿವೃದ್ಧಿಯಾಗಿದೆ. ಚಿತ್ರದುರ್ಗ ಅಭಿವೃದ್ಧಿಯಾಗುತ್ತದೆ ಎಂಬ ಭರವಸೆ ಇದೆ. ಕ್ಷೇತ್ರಕ್ಕೆ ಆಗಬೇಕಾದ ಕಾರ್ಯಗಳನ್ನು ಪತ್ತೆ ಆದಕ್ಕೆ ಸಂಬಂಧಿಸಿದಂತೆ ಅಗತ್ಯವಾಗಿರುವವರನ್ನು ಭೇಟಿ ಮಾಡಿ ಮನವಿಯನ್ನು ಸಲ್ಲಿಸಿದ್ದಾರೆ. ಬಯಲು ಸೀಮೆಯಾದ ಚಿತ್ರದುರ್ಗವನ್ನು ಸಂಸದರು ನೀರಾವರಿಯ್ನನಾಗಿ ಮಾಡಿ ಕ್ಷೇತ್ರವನ್ನು ಹಸಿರಾಗಿಸಲಿ, ಜನತೆ ಆರ್ಥಿಕವಾಗಿ ಚೇತರಿಕೆಯನ್ನು ಕಂಡುಕೊಳ್ಳಲಿ ಎಂದು ಶುಭ ಹಾರೈಸಿದರು.

ವ ್ ು ು ರ ್ ು ಘ ಾ ವ ್ ು ಅ ್ ದ ್ ಉಸ್ತುವಾರಿಗಳಾದ ಬಸವಪ್ರಭು ಶ್ರೀಗಳು ಮಾತನಾಡಿ, ಕಾರಜೋಳ ರವರ ಕ್ಷೇತ್ರ ಬಾಗಲಕೋಟೆಯಾಗಿದೆ, ಮುಧೋಳಾಗಿದೆ. ಅವರು ಚಿತ್ರದುರ್ಗದ ಸಂಸದರಾಗಿದ್ದಾರೆ. ಇದು ನಿಜವಾದ ಯೋಗಾ ಯೋಗವಾಗಿದೆ. ಈ ಹಿಂದೆ ಕಾರಜೋಳ ರವರು ವಿವಿಧ ರೀತಿಯ ಸಚಿವರಾಗಿ ಕೆಲಸವನ್ನು ಮಾಡಿದ್ದಾರೆ ಇದಕ್ಕಿಂತ ಮುಖ್ಯವಾಗಿ ಅವರಲ್ಲಿ ಬಸವಣ್ಣರವರ ಹೃದಯವಿದೆ. ಎಲ್ಲರನ್ನು ಪ್ರೀತಿಸುವ ಎಲ್ಲರನ್ನು ಅಪ್ಪಿಕೊಳ್ಳುವ ಮಹಾನ್ ನಾಯಕರಾಗಿದ್ದಾರೆ. ಇಂತಹ ವ್ಯಕ್ತಿ ಸಂಸದರಾಗಿ ಆಯ್ಕೆಯಾಗಿರುವುದು ಸಂತೋಷವಾಗಿದೆ. ಸಮ ಸಮಾಜದ ನಿರ್ಮಾಣಮಾಡಿದ ಬಸವಣ್ಣರವರಂತೆ ಕಾರಜೋಳರವರು ಸಹಾ ನ್ಯಾಯವನ್ನು ನೀಡುವಂತ ಜನನಾಯಕರಾಗಿದ್ದಾರೆ. ಇವರಿಂದ ಚಿತ್ರದುರ್ಗ ಜಿಲ್ಲೆಯಲ್ಲಿ ಭದ್ರೆ ಹರಿದು ಹಸಿರಿಕರಣವಾಗಲಿ ಅವರ ಒಳ್ಳೆಯ ಕಾರ್ಯಗಳಿಗೆ ನಮ್ಮ ಬೆಂಬಲ ಇದೆ ಎಂದರು.ಹಿರಿಯೂರಿನ ಆದಿಜಾಂಬವ ಮಠದ ಷಡಾಕ್ಷರಮುನಿ ಶ್ರೀಗಳು ಮಾತನಾಡಿ, ಸಂಸದರು ಎಲ್ಲಾ ಜನತೆಯ ನಾಡಿ ಮಿಡಿತವನ್ನು ತಿಳಿದವರಾಗಿದ್ದಾರೆ. ಇಂತಹ ಒಳ್ಳೇಯ ಸಂಸದರು ಜಿಲ್ಲೆಗೆ ಸಿಕ್ಕಿರುವುದು ಎಲ್ಲರ ಭಾಗ್ಯವಾಗಿದೆ. ಸಂಸದರಾದ ನಂತರ ಜಿಲ್ಲೆಗೆ ಬೇಕಾದ ಕಾರ್ಯ ಚಟುವಟಿಕೆಗಳನ್ನು ಮಾಡುವುದರ ಮೂಲಕ ಜಿಲ್ಲೆಯನ್ನು ಪ್ರಗತಿಯತ್ತ ಕೊಂಡ್ಯೂಯುವ ಕಾರ್ಯವನ್ನು ಮಾಡಿದ್ದಾರೆ. ಈ ಕಚೇರಿಗೆ ನೊಂದವರು ಸಂಕಷ್ಟಕ್ಕೆ ಒಳಗಾದವರು ಬರುತ್ತಾರೆ ಅವರ ಸಮಸ್ಯೆಯನ್ನು ತಿಳಿಯುವುದು ಮಾತ್ರ ಅದಕ್ಕೆ ಪರಿಹಾರವನ್ನು ಕಂಡುಕೊಳ್ಳುವ ನಿಟ್ಟಿನಲ್ಲಿ ಜನ ಸಂಪರ್ಕ ಕಚೇರಿ ಕೆಲಸ ಮಾಡಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಮಾದಾರ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚನ್ನಯ್ಯ ಶ್ರೀಗಳು, ಯಾದವಾನಂದ ಗುರುಪೀಠದ ಶ್ರೀ ಕೃಷ್ಣಾಯಾದವನಂದ ಶ್ರೀಗಳು, ಬಂಜಾರ ಗುರುಪೀಠದ ಸೇವಾಲಾಲ್ ಶ್ರೀಗಳು, ಮೇದಾರ ಗುರುಪೀಠದ ಬಸವಕೇತೇಶ್ವರ ಶ್ರೀಗಳು, ಬ್ರಹ್ಮಕುಮಾರಿ ಈಶ್ವರಿ ವಿಶ್ವವಿದ್ಯಾಲಯದ ಅಕ್ಕನವರು, ಸಿದ್ದಯ್ಯನ ಕೋಟೆಯ ಬಸವಲಿಂಗ ಶ್ರೀಗಳು, ಚಕ್ಕೋತಿಯ ಶಿವಮೂರ್ತಿ ಶ್ರೀಗಳು, ಮಡಿವಾಳ ಗುರುಪೀಠದ ಮಡಿವಾಳ ಮಾಚಿದೇವ ಶ್ರೀಗಳು, ಮಧೋಳ್‌ನಿಂದ ರೆಡ್ಡಿ ಸಮುದಾಯದ ಶ್ರೀಗಳು, ಛಲವಾದಿ ಗುರುಪೀಠದ ಬಸವನಾಗ್ತಿದೇವ ಶ್ರೀಗಳು ಭಾಗವಹಿಸಿದ್ದರು.

ಇದೇ ರೀತಿ ಮಾಜಿ ಶಾಸಕರುಗಳಾದ ಜಿ.ಎಚ್.ತಿಪ್ಪಾರೆಡ್ಡಿ,ಎಸ್.ಕೆ.ಬಸವರಾಜನ್, ಜಿ.ಪಂ. ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಭಾಗ್ಯ ಬಸವರಾಜನ್, ಬಿಜೆಪಿ ಜಿಲ್ಲಾಧ್ಯಕ್ಷರುಗಳಾದ ಮುರಳಿ, ಹನುಮಂತೇಗೌಡ, ಜಿ.ಪಂ. ಮಾಜಿ ಅನಿತ್ ಕುಮಾರ್, ಸದಸ್ಯರಾದ ಅಜ್ಜಪ್ಪ, ನಗರಸಭಾ ಸದಸ್ಯರಾದ ವೆಂಕಟೇಶ್, ಹರೀಶ್, ಶ್ರೀನಿವಾಸ್, ಭಾಸ್ಕರ್ ಸೇರಿದಂತೆ ಬಿಜೆಪಿ ಜೆಡಿಎಸ್ ಪಕ್ಷದ ಪದಾಧಿಕಾರಿಗಳು, ಮುಖಂಡರು ಕಾರ್ಯಕರ್ತರು ಭಾಗವಹಿಸಿದ್ದರು. ಇದೇ ಸಂದರ್ಭದಲ್ಲಿ ಪಕ್ಷ ಮುಖಂಡರು, ಪದಾಧಿಕಾರಿಗಳು ಮುಖಂಡರು, ಅಭೀಮಾನಿಗಳು ಹಿತೈಷಿಗಳು ಸಂಸದರಿಗೆ ಪೇಟ, ಶಾಲು, ಹಾರ ಬೊಕ್ಕೆಗಳನ್ನು ನೀಡುವುದರ ಮೂಲಕ ಶುಭ ಕೋರಿದರು.

## ಫಾಸ್ಟ್ ನ್ಯೂಸ್

### ಜಿಲ್ಲಾಧಿಕಾರಿಗಳಿಂದ ಚಿಗಟೇರಿ ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ, ವಾರ್ಡ್‌ಗಳ ಪರಿಶೀಲನೆ

» ದಾವಣಗೆರೆ

ಚಿಗಟೇರಿ ಜಿಲ್ಲಾ ಆಸ್ಪತ್ರೆಗೆ (ಆ.29) ಗುರುವಾರ ರಾತ್ರಿ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಅವರು ಆಸ್ಪತ್ರೆಯನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಮತ್ತು ಚಿಕಿತ್ಸೆಗಾಗಿ ಬರುವವರಿಗೆ ಸಕಾಲಕ್ಕೆ ಚಿಕಿತ್ಸೆ ಲಭ್ಯವಾಗಬೇಕು. ತುರ್ತು ನಿಗಾ ಘಟಕದಲ್ಲಿ ಸಿಬ್ಬಂದಿಗಳು ಹೆಚ್ಚಿನ ನಿಗಾವಹಿಸಬೇಕು. ರೋಗಿಗಳಿಗೆ ಯಾವುದೇ ಔಷಧದ ಕೊರತೆಯಾಗದಂತೆ ನೋಡಿಕೊಂಡು ಔಷಧ ಅಗತ್ಯವಿದ್ದಲ್ಲಿ ನಮ್ಮ ಗಮನಕ್ಕೆ ತರಬೇಕೆಂದು ಸೂಚನೆ ನೀಡಿ ರಾತ್ರಿ ವೇಳೆಯಲ್ಲಿ ಭದ್ರತಾ ದೃಷ್ಟಿಯಿಂದ ಸಿಸಿ ಕ್ಯಾಮೆರಾ ಅಳವಡಿಕೆ ಹೆಚ್ಚಿಸಿ ಹೆಚ್ಚುವರಿ ಭದ್ರತಾ ಸಿಬ್ಬಂದಿಗಳನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಬೇಕೆಂದು ತಿಳಿಸಿ ಮುಂದಿನ ದಿನಗಳಲ್ಲಿ ಆಸ್ಪತ್ರೆಗೆ ಅನಿರೀಕ್ಷಿತ ಭೇಟಿ ನೀಡಲಿದ್ದು ಸಿಬ್ಬಂದಿಗಳು ಬಹಳ ಎಚ್ಚರಿಕೆಯಿಂದಿರಬೇಕೆಂದು ಸೂಚನೆ ನೀಡಿದರು. ಈ ವೇಳೆ ಜಿಲ್ಲಾ ಸರ್ಜನ್ ಡಾ; ನಾಗೇಂದ್ರಪ್ಪ ಹಾಗೂ ಸಿಬ್ಬಂದಿಯವರು ಉಪಸ್ಥಿತರಿದ್ದರು.

### ದಾವಣಗೆರೆ ಜಿಲ್ಲೆಯಾದ್ಯಂತ ಸೆಪ್ಟೆಂಬರ್ 2 ರಿಂದ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ

» ದಾವಣಗೆರೆ

ರಾಜ್ಯ ಸರ್ಕಾರವು 2024–25 ನೇ ಸಾಲಿನ ಅಯವ್ಯಯ ಭಾಷಣದಲ್ಲಿ ಘೋಷಿಸಿದಂತೆ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ದಾವಣಗೆರೆ ಜಿಲ್ಲೆಯ ಉಪನೋಂದಣಾ ಕಚೇರಿಗಳಿಗೂ ವಿಸ್ತರಿಸಿ ಜಾರಿಗೊಳಿಸಿದ್ದು ಸೆಪ್ಟೆಂಬರ್ 2 ರಿಂದ ಅನುಷ್ಠಾನವಾಗಲಿದೆ ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ತಿಳಿಸಿದ್ದಾರೆ. ಪ್ರಸ್ತುತ ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದ್ದು, ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯೊಳಗಿನ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು. ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು ಎಂದು ಅವರು ತಿಳಿಸಿದ್ದಾರೆ.ಸ್ಲಾಟ್ ಲಭ್ಯವಿರುವಂತಹ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ಉಪ ನೋಂದಣಿ ಕಚೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ. ಕಚೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ. ಹಾಗಾಗಿ ಸಾರ್ವಜನಿಕರು ಎನಿವೇರ್ ನೋಂದಣಿ ವ್ಯವಸ್ಥೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಾಲ್ಯವಿವಾಹ ತಡೆಯುವ ನಿಟ್ಟಿನಲ್ಲಿ ಜಾಗೃತಿ



» ಚಳ್ಳಕೆರೆ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಬಾಲ್ಯವಿವಾಹ ತಡೆಯುವ ನಿಟ್ಟಿನಲ್ಲಿ ಹಲವಾರು ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿದ್ದರೂ ಟಿ.ಎನ್.ಕೋಟೆ ಗ್ರಾಮದಲ್ಲಿ ಬಾಲ್ಯವಿವಾಹ ಸಿದ್ದತೆಯಲ್ಲಿದ್ದ ಕುಟುಂಬಕ್ಕೆ ಜಾಗೃತಿ ಮೂಡಿಸಿ ಬಾಲ್ಯವಿವಾಹವನ್ನು ತಡೆಯಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಹರಿಪ್ರಸಾದ್ ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ಅವರು, ಟಿ.ಎನ್.ಗ್ರಾಮದ ಅಪ್ರಾಪ್ತ ಬಾಲಕಿಯನ್ನು ಅಜ್ಜಿಯ ಅನಾರೋಗ್ಯ ಹಿನ್ನೆಲೆಯಲ್ಲಿ ಹಿರಿಯೂರು ತಾಲ್ಲೂಕಿನ ಬೇತೂರುಪಾಳ್ಯದ ಸಂಬಂಧಿ ಶಿವಣ್ಣ ಎಂಬುವವರಿಗೆ ಕೊಟ್ಟು ವಿವಾಹ ಮಾಡುಲು ನಿರ್ಧರಿಸಿ ಸಿದ್ದತೆ ಮಾಡಿಕೊಳ್ಳುವ ಸಂದರ್ಭದಲ್ಲಿ ಮೇಲ್ವಿಚಾರಕಿ ಸುಮಿತ್ರರವರ ಸಮಯೋಚಿತ ನಿರ್ಧಾರದಿಂದ ಸ್ಥಳಕ್ಕೆ ತೆರಳಿದ ಅಧಿಕಾರಿಗಳು ಬಾಲ್ಯವಿವಾಹವನ್ನು ತಡೆಯವಲ್ಲಿ ಯಶಸ್ವಿಯಾಗಿದ್ದಾರೆ. ಜಿಲ್ಲಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸವಿತರವರ ಮಾರ್ಗದರ್ಶನದಲ್ಲಿ ಮಕ್ಕಳ ರಕ್ಷಣಾ ವಿಭಾಗದ ಸಿಬ್ಬಂದಿ ರೇಖಾ, ಸಹಾಯವಾಣಿ ಸಂಯೋಜಕಿ ಲಕ್ಷ್ಮಿ, ಶಾಲಾ ಮುಖ್ಯ ಶಿಕ್ಷಕ ರಾಜಣ್ಣ, ಪಿಡಿಒ ತ್ರಿವೇಣಿ, ಅಧ್ಯಕ್ಷೆ ಓಬಕ್ಕ ಇವರ ನೆರವಿನೊಂದಿಗೆ ಬಾಲಕಿಯ ಪೋಷಕರಿಗೆ ಬಾಲ್ಯವಿವಾಹಕ್ಕೆ ಪ್ರಯತ್ನಿಸಿದರೆ ಎರಡು ವರ್ಷ ಜೈಲು, ಒಂದು ಲಕ್ಷ ದಂಡ ಕುರಿತು ಮಾಹಿತಿ ನೀಡಿದಾಗ ಅವರು ಬಾಲ್ಯವಿವಾಹವನ್ನು ನಡೆಸುದಿಲ್ಲವೆಂದು ಮುಚ್ಚಳಿಕೆ ಬರೆದುಕೊಟ್ಟಿದ್ದಾರೆಂದು ತಿಳಿಸಿದರು

# ಕ್ಷೇತ್ರದ ಅಭಿವೃದ್ಧಿಗೆ ಪ್ರಯತ್ನ: ಸಂಸದ ಕಾರಜೋಳ

» ಚಿತ್ರದುರ್ಗ



ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಸರ್ವಾಂಗೀಣ ಅಭಿವೃದ್ಧಿಗೆ ಮುಂದಿನ ದಿನಮಾನದಲ್ಲಿ ಪ್ರಮಾಣಿಕ ಪ್ರಯತ್ನವನ್ನು ಮಾಡುವುದಾಗಿ ಸಂಸದ ಗೋವಿಂದ ಎಂ.ಕಾರಜೋಳ ಭರವಸೆಯನ್ನು ನೀಡಿದ್ದಾರೆ.

ನಗರದ ಜೆಸಿಆರ್ ಬಡಾವಣೆಯ ಗಣೇಶ ದೇವಾಲಯದ ಬಳಿ ಶುಕ್ರವಾರ ನೂತನವಾಗಿ ಸಂಸದರ ಕಚೇರಿ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಚಿತ್ರದುರ್ಗ ಲೋಕಸಭಾ ಕ್ಷೇತ್ರ ಅತಿ ಹೆಚ್ಚು ಹಿಂದುಳಿದ ವರ್ಗದವರನ್ನು, ಪರಿಶಿಷ್ಟ ಜಾತಿ/ಪಂಗಡದವರನ್ನು ಹೊಂದಿರುವ ಬಡತನರೇಖೆಯ ಮಟ್ಟಕ್ಕಿಂತ ಕೆಳಗಿರುವವರೇ ಈ ಕ್ಷೇತ್ರದಲ್ಲಿ ಹೆಚ್ಚಾಗಿದ್ದಾರೆ. ಈ ಕ್ಷೇತ್ರದಲ್ಲಿ ಜನರ ಜೀವನ ಮಟ್ಟ ಸುಧಾರಿಸಬೇಕಾಗಿದೆ, ಆರ್ಥಿಕ ಚಟುವಟಿಕೆಗಳು ವೇಗ ಪಡೆದುಕೊಳ್ಳಬೇಕಾಗಿದೆ, ಅಭಿವೃದ್ಧಿ ಕಾರ್ಯಗಳು ಸಮರೋಪಾದಿಯಲ್ಲಿ ನಡೆಯಬೇಕಾಗಿದೆ. ಈ ಹಿನ್ನೆಲೆಯಲ್ಲಿ ಚಿತ್ರದುರ್ಗ ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗಾಗಿ ಎಲ್ಲರೂ ಪಕ್ಷಭೇದ ಮರೆತು ಕೆಲಸ ಮಾಡುವ ಅನಿವಾರ್ಯತೆಯಿದೆ ಎಂದರು.ಲೋಕಸಭಾ ಅಧಿವೇಶನ ಮುಗಿದ ಬಳಿಕ ಕಳೆದ 20 ದಿನಗಳಿಂದ ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡಿ ಇಡೀ ಲೋಕಸಭಾ ಕ್ಷೇತ್ರದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಜನರ ಸಮಸ್ಯೆಗಳನ್ನು ಆಲಿಸುವ, ಅಭಿವೃದ್ಧಿಯ ದೃಷ್ಟಿಯಿಂದ ಹಲವು ಸಭೆಗಳನ್ನು ನಡೆಸುವ ಕೆಲಸದಲ್ಲಿ ತೊಡಗಿಸಿಕೊಂಡಿದ್ದೇನೆ. ಭದ್ರಾ ಮೇಲ್ದಂಡೆ ಯೋಜನೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸುವ ಸಂಕಲ್ಪವನ್ನು ಮಾಡಿದ್ದು, ಈ ಹಿನ್ನೆಲೆಯಲ್ಲಿ ಕೇಂದ್ರ ಹಣಕಾಸು ಸಚಿವರಾದ ನಿರ್ಮಲ ಸೀತಾರಾಮನ್ ಅವರನ್ನು, ಜಲಶಕ್ತಿ ಸಚಿವರಾದ ಸಿ.ಆರ್.ಪಾಟೀಲ್ ರನ್ನು ಭೇಟಿ ಮಾಡಿ ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರ ಸರ್ಕಾರ ಘೋಷಣೆ ಮಾಡಿದ ಅನುದಾನ ಬಿಡಗಡೆ ಮಾಡುವಂತೆ ಮನವಿ ಮಾಡಿದ್ದು,ಭದ್ರಾ ಮೇಲ್ದಂಡೆ ಯೋಜನೆಗೆ ವೇಗ ನೀಡುವ ದೃಷ್ಟಿಯಿಂದ ಸಭೆ ನಡೆಸಿ ಅರಣ್ಯ ಇಲಾಖೆಯಿಂದ ಹಾಗೂ ಭೂ–ಸ್ವಾಧೀನ ಪ್ರಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ಬೆಂಗಳೂರಿನಲ್ಲಿ ಮುಖ್ಯಕಾರ್ಯದರ್ಶಿ ಮಟ್ಟದಲ್ಲಿ ಸಭೆ ಏರ್ಪಾಡು ಮಾಡಲು ಕ್ರಮ ಕೈಗೊಂಡಿದ್ದೇನೆ ಎಂದರು.

ಚಿತ್ರದುರ್ಗದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಿ ಇನ್ನಷ್ಟು ಪ್ರವಾಸಿಗರನ್ನು ಆಕರ್ಷಿಸುವ ದೃಷ್ಟಿಯಿಂದ ಕೇಂದ್ರ ಪ್ರವಾಸೋಧ್ಯಮ ಸಚಿವರಾದ ಗಜೇಂದ್ರ ಸಿಂಗ್ ಶೆಖಾವತ್‌ರನ್ನು ಭೇಟಿ ಮಾಡಿ ಚಿತ್ರದುರ್ಗದ ಕಲ್ಲಿನ ಕೋಟೆ, ಆಡುಮಲ್ಲೇಶ್ವರ ಪ್ರಾಣಿ ಸಂಗ್ರಹಾಲಯ, ಜೋಗಿಮಟ್ಟಿ ವಿಹಾರಧಾಮ, ಚಂದ್ರವಳ್ಳಿ ಕೆರೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು 20 ಕೋಟಿ ಅನುದಾನ ಕೇಂದ್ರ ಶಿಕ್ಷಣ ಸಚಿವರಾದ ಧರ್ಮೇಂದ್ರ ಪ್ರಧಾನ್‌ರವರನ್ನು ಭೇಟಿ ಮಾಡಿ 2025–26 ನೇ ಶೈಕ್ಷಣಿಕ ವರ್ಷದಿಂದ ಚಿತ್ರದುರ್ಗದ ಕೇಂದ್ರೀಯಾ ವಿದ್ಯಾಲಯವನ್ನು ಪ್ರಾರಂಭ, ಹೆದ್ದಾರಿಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಭೇಟಿ ಮಾಡಿ,ಚಿತ್ರದುರ್ಗದಿಂದ–ಚಳ್ಳಕೆರೆ–ಪಾವಗಡ ಮುಖಾಂತರ ಆಂಧ್ರಪ್ರದೇಶದ ಪೆನುಕೊಂಡವರೆಗಿನ1783.ಹೆದ್ದಾರಿಯನ್ನು ರಾಷ್ಟ್ರೀಯ ಹೆದ್ದಾರಿಯನ್ನಾಗಿ ಘೋಷಣೆ ಮಾಡುವಂತೆ ಮನವಿ ಮಾಡಲಾಗಿದೆ ಎಂದು ಸಂಸದರು ತಿಳಿಸಿದರು.

ಚಳ್ಳಕೆರೆ ನಗರ ಪರಿಮಿತಿಯಲ್ಲಿ 7 ಕಿ.ಮೀ ಉದ್ದದ ಹೆದ್ದಾರಿಯನ್ನು ನಾಲ್ಕು ಪಥದ ಹೆದ್ದಾರಿಯನ್ನಾಗಿ ಮಾಡಲು ಅನುದಾನ ಬಿಡುಗಡೆ ರಾಷ್ಟ್ರೀಯ ಹೆದ್ದಾರಿ–48 ರಲ್ಲಿ ಹಿರಿಯೂರು ಬಳಿ ನಿರ್ಮಾಣವಾಗುತ್ತಿರುವ ಫ್ಲೈಓವರನ್ನು ನಿರ್ಮಾಣ ಮೂಡಿಗೆರೆಯಿಂದ–ಚಿಕ್ಕಮಗಳೂರು–ಕಡೂರು–ಹೊಸದುರ್ಗ–ಹೊಳಲ್ಕೆರೆಯವರೆಗೆ ಈಗಾಗಲೇ ಅಭಿವೃದ್ಧಿಪಡಿಸುತ್ತಿರುವ ರಾಷ್ಟ್ರೀಯ ಹೆದ್ದಾರಿಯನ್ನು ದಾವಣಗೆರೆ ತಾಲ್ಲೂಕು ಆನಗೋಡುವರೆಗೆ ವಿಸ್ತರಣೆ, ಹಿರಿಯೂರು ಬಳಿ ರಾಷ್ಟ್ರೀಯ ಹೆದ್ದಾರಿ–48 ರಲ್ಲಿ ಆನೆಸಿದ್ರಿ ಗ್ರಾಮದ ಬಳಿ ಕೆಳಸೇತುವೆ ನಿರ್ಮಾಣ ಮಾಡಲು, ಸಿರಾ ತಾಲ್ಲೂಕು ತಾವರಕೆರೆ ಬಳಿ ಹಾಲಿ ಇರುವ ಕೆಳಸೇತುವೆ ಅವೈಜ್ಞಾನಿಕವಾಗಿ ನಿರ್ಮಾಣವಾಗಿದ್ದು ಅದನ್ನು ಸರಿಪಡಿಸುವಂತೆ ಮನವಿ ಮಾಡಿದ್ದೇನೆ ಎಂದರು.

ಹಿರಿಯೂರು–ಚಳ್ಳಕೆರೆ ನಾಲ್ಕುಪಥದ ರಾಷ್ಟ್ರೀಯ ಹೆದ್ದಾರಿ ನಿರ್ಮಾಣ ಯೋಜನೆಯಲ್ಲಿ ಕಳವಿಬಾಗಿ, ಲಕ್ಷ್ಮೀಪುರ–ಸಿದ್ದಾಪುರ, ವೀರದಿಮ್ಮನಹಳ್ಳಿ, ಕಮ್ಮತಮರಿಕುಂಟೆ ಸೇರಿದಂತೆ ಹಲವು ಗ್ರಾಮಗಳ ಬಳಿ ಕೆಳಸೇತುವೆ/ಮೇಲುಸೇತುವೆ. ಸರ್ವೀಸ್ ರಸ್ತೆ ನಿರ್ಮಾಣ ಸೇರಿದಂತೆ ಹಲವು ಮಾರ್ಪಾಡುಗಳಿಗೆ ಶಿಫಾರಸ್ಸು ಮಾಡಲಾಗಿದೆ.ಪಾವಗಡ–ಮಡಕಶಿರಾ ಹೊಸ ಬ್ರಾಡ್‌ಗೇಜ್ ನಿರ್ಮಾಣಕ್ಕೆ ರೂ.265 ಕೋಟಿ. ಹೊಸದುರ್ಗ ರೋಡ್‌ನಲ್ಲಿ ವಿಶ್ವಮಾನವ ಎಕ್ಸ್‌ಪ್ರೆಸ್ ಸೇರಿದಂತೆ ಹಲವಾರು ರೈಲುಗಳ ನಿಲುಗಡೆ ಹಾಗೂ ಹೊಳಲ್ಕೆರೆ ತಾಲ್ಲೂಕು ರಾಮಗಿರಿ ಮತ್ತು ಅಮೃತಾಪುರ ರೈಲ್ವೆ ನಿಲ್ದಾಣದಲ್ಲಿ ಕೆಲವು ಪ್ಯಾಸೆಂಜರ್ ಟ್ರೈನ್‌ಗಳನ್ನು ನಿಲುಗಡೆ ಮಾಡುವಂತೆ ಮನವಿ ಮಾಡಲಾಗಿದೆ.

ಮೊಳಕಾಲ್ಮೂರು ರೈಲ್ವೆ ನಿಲ್ದಾಣದಲ್ಲಿ ಹೊಸಪೇಟೆ–ಬೆಂಗಳೂರು,ಕಾರಟಗಿ–ಯಶವಂತಪುರ ರೈಲು ನಿಲುಗಡೆ ಸಮಯ ಬದಲಾವಣೆ ಚಳ್ಳಕೆರೆ–ಪಾವಗಡ ರಸ್ತೆಯಲ್ಲಿ ಚಳ್ಳಕೆರೆ ನಗರಪರಿಮಿತಿಯಲ್ಲಿ ರೈಲ್ವೆ ಗೇಟ್ ನಂ.45 ಕ್ಕೆ ಮೇಲು ಸೇತುವೆ ನಿರ್ಮಾಣ ಮಾಡಲು ಮನವಿ ಮಾಡಲಾಗಿದ್ದು, ಕೇಂದ್ರ ಸರ್ಕಾರದ ಬುಡಕಟ್ಟು ವ್ಯವಹಾರಗಳ ಸಚಿವಾಲಯದಿಂದ ಚಿತ್ರದುರ್ಗ ಜಿಲ್ಲೆಯಲ್ಲಿ ಅತಿ ಹೆಚ್ಚು ಪರಿಶಿಷ್ಟ ಪಂಗಡದವರಿರುವ ಚಳ್ಳಕೆರೆಯಲ್ಲಿ ಏಕಲವ್ಯ ಮಾದರಿ ವಸತಿ ಶಾಲೆ ನಿರ್ಮಾಣ ಮಾಡಲು 15 ಎಕರೆ ಸರ್ಕಾರಿ ಜಮೀನು ಗುರುತಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ.

ಕೇಂದ್ರ ಸರ್ಕಾರದ ಸಂಸ್ಕೃತಿ ಇಲಾಖೆಯಿಂದ ಚಿತ್ರದುರ್ಗ ನಗರದಲ್ಲಿ ಪ್ರಾದೇಶಿಕ ವಿಜ್ಞಾನ ಕೇಂದ್ರ ಸ್ಥಾಪನೆ ಮಾಡಲು ಸುಮಾರು 5 ಎಕರೆ ಜಮೀನು ಗುರುತಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಈಗಾಗಲೇ ಸುಮಾರು 15 ಕೋಟಿ ಅನುದಾನವನ್ನು ಸೈನ್ಸ್ ಪಾರ್ಕ್ ನಿರ್ಮಾಣ ಮಾಡುವ ಉದ್ದೇಶದಿಂದ ಕಾಯ್ದಿರಿಸಲಾಗಿದೆ, ಕೇಂದ್ರ ಸರ್ಕಾರದ ಪಾಲನ್ನೂ ಕೂಡ ಬಳಸಿಕೊಂಡು ಇನ್ನೂ ಉತ್ತಮವಾಗಿ ವಿಜ್ಞಾನ ಕೇಂದ್ರ ಸ್ಥಾಪನೆ ಮಾಡುವ ಉದ್ದೇಶವಿದೆ. ಚಿತ್ರದುರ್ಗ ನಗರದ ಸಮೀಪವೇ ಇರುವ ಓಬಣ್ಣನಹಳ್ಳಿ ಗ್ರಾಮದಲ್ಲಿ ಅತಿವೃಷ್ಟಿಯಿಂದ ಸಂತ್ರಸ್ಥರಾದ ಜನರ ಸಮಸ್ಯೆಗಳನ್ನು ಖುದ್ದಾಗಿ ಭೇಟಿ ನೀಡಿ ಆಲಿಸಿದ್ದೇನೆ. ಇಡೀ ಗ್ರಾಮವನ್ನು ವಸತಿ ಸಹಿತ ಪುನರ್ನಿರ್ಮಾಣ ಮಾಡುವ ಸಂಕಲ್ಪದೊಂದಿಗೆ ಅಗತ್ಯ ಪ್ರಸ್ತಾವನೆ ಸಿದ್ದಪಡಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ತಿಳಿಸಿದರು.

ಚಿತ್ರದುರ್ಗ ಬಿಜೆಪಿ ಜಿಲ್ಲಾಧ್ಯಕ್ಷ ಮುರಳಿ, ಮಧುಗಿರಿ ಜಿಲ್ಲಾಧ್ಯಕ್ಷ ಹನುಮಂತೇಗೌಡ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್ ವಕ್ತಾರ ನಾಗರಾಜ್ ಬೇದ್ರೆ, ದಗ್ಗೆ ಶಿವಪ್ರಕಾಶ್ ಭಾಗವಹಿಸಿದ್ದರು.

# ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸೆ.1 ರಂದು ಬಿಎಂಟಿಸಿ ಕಂಡಕ್ಟರ್ ನೇಮಕಾತಿ ಸ್ಪರ್ಧಾತ್ಮಕ ಪರೀಕ್ಷೆ

### ದಾವಣಗೆರೆ 4 ಕೇಂದ್ರಗಳಲ್ಲಿ 2209 ಅಭ್ಯರ್ಥಿಗಳು, ಸುಗಮ ಪರೀಕ್ಷೆಗಾಗಿ ಕ್ರಮ ಕೈಗೊಳ್ಳಲು ಸೂಚನೆ

» ದಾವಣಗೆರೆ



ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿನ ಕಂಡಕ್ಟರ್ ಹುದ್ದೆಗಳ ನೇಮಕಾತಿಗೆ ಸೆಪ್ಟೆಂಬರ್ 1 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸುತ್ತಿದ್ದು ದಾವಣಗೆರೆ ನಗರದ 4 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಈ ಕೇಂದ್ರಗಳಲ್ಲಿ ನಡೆಯುವ ಪರೀಕ್ಷೆಯನ್ನು ಸುಗಮವಾಗಿ ನಡೆಸಲು ಕೆಇಎ ನಿರ್ದೇಶನದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್ ತಿಳಿಸಿದರು.

ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಪರೀಕ್ಷಾ ಪೂರ್ವ ಸಿದ್ದತಾ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಸೂಚನೆ ನೀಡಿದರು. ಸೆಪ್ಟೆಂಬರ್ 1ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ ಮೊದಲ ಪತ್ರಿಕೆ ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 4.30 ರವರೆಗೆ ಎರಡನೇ ಪತ್ರಿಕೆಯ ಪರೀಕ್ಷೆ ನಡೆಯಲಿದೆ. ಎ.ವಿ.ಕಮಲಮ್ಮ ಪಿಯು ಕಾಲೇಜು ಕೇಂದ್ರದಲ್ಲಿ 552, ಮೋತಿ ವೀರಪ್ಪ ಸರ್ಕಾರಿ ಪದವಿ ಪೂರ್ವ ಕಾಲೇಜು 553, ರಾಜನಹಳ್ಳಿ ಸೀತಮ್ಮ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು 552 ಹಾಗೂ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ 552 ಅಭ್ಯರ್ಥಿಗಳು ಸೇರಿ ಒಟ್ಟು 2209 ಅಭ್ಯರ್ಥಿಗಳು ಪರೀಕ್ಷೆ ಬರೆಯುವರು.

ಅಭ್ಯರ್ಥಿಗಳು ಕೇಂದ್ರದೊಳಗೆ ಮೊಬೈಲ್ ಸೇರಿದಂತೆ ಯಾವುದೇ ಎಲೆಕ್ಟ್ರಾನಿಕ್ಸ್ ವಸ್ತುಗಳನ್ನು ತರಬಾರದು ಮತ್ತು ಪರೀಕ್ಷಾ ನಿಯಮಾವಳಿ ರೀತ್ಯ ನಡೆದುಕೊಳ್ಳಬೇಕು. ಕೇಂದ್ರದೊಳಗೆ ಅಭ್ಯರ್ಥಿಗಳನ್ನು ತಪಾಸಣೆ ಮಾಡಿ ಬಿಡಬೇಕಾಗಿರುವುದರಿಂದ ಸಾಕಷ್ಟು ಮುಂಚಿತವಾಗಿ ಕೇಂದ್ರದಲ್ಲಿರಬೇಕಾಗುತ್ತದೆ.

ಕೆಇಎ ಯಿಂದ ಇತರೆ ಜಿಲ್ಲೆಗಳಿಂದ ಪರೀಕ್ಷಾ ಮೇಲ್ವಿಚಾರಕರನ್ನು ನೇಮಕ ಮಾಡಲಿದ್ದು ಜಿಲ್ಲಾ ಮಟ್ಟದಲ್ಲಿ ಪ್ರತಿ ಕೇಂದ್ರಕೆ ಒಬ್ಬರಂತೆ ನೇಮಕ ಮಾಡಲಾಗುತ್ತದೆ ಎಂದ ಅವರು ಪರೀಕ್ಷೆಯನ್ನು ಸುವ್ಯವಸ್ಥಿತವಾಗಿ ನಡೆಸುವ ಮೂಲಕ ಯಾವುದೇ ಪರೀಕ್ಷಾ ಅವ್ಯವಹಾರಗಳಿಗೆ ಅವಕಾಶ ಇಲ್ಲದಂತೆ ನೋಡಿಕೊಳ್ಳಲು ಸೂಚನೆ ನೀಡಿದರು.

144 ಸೆಕ್ಷನ್ ಜಾರಿ; ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತ 144 ಸೆಕ್ಷನ್ ಜಾರಿಗೊಳಿಸಿ 200 ಮೀಟರ್ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಯಲ್ಲಿರುತ್ತದೆ. ಈ ವೇಳೆ ಅಲ್ಲಿ ಯಾವುದೇ ಜೆರಾಕ್ಸ್ ಅಂಗಡಿ, ಇಂಟರ್‌ನೆಟ್ ಸೆಂಟರ್‌ಗಳನ್ನು ತೆರೆಯುವಂತಿಲ್ಲ.

ಸಭೆಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ಹಾಗೂ ವಿವಿಧ ಕಾಲೇಜುಗಳ ಪ್ರಾಂಶುಪಾಲರು ಉಪಸ್ಥಿತರಿದ್ದರು.

# ಚಲುಮೆರುದ್ರಸ್ವಾಮಿ ತಪೋವನದಲ್ಲಿ ಅನುಭಾವಶ್ರಾವಣಿ ಕಾರ್ಯಕ್ರಮ



» ಚಳ್ಳಕೆರೆ

ಕಳೆದ ನೂರಾರು ವರ್ಷಗಳ ಹಿಂದೆಯೇ ಈ ನಾಡಿನ ಮಹಾಪುರುಷರು, ಋಷಿಮುನಿಗಳು, ಸಾಧಕರು, ಧಾರ್ಮಿಕ ಚಿಂತಕರು ಕೈಗೊಂಡ ಹಲವಾರು ಸಮಾಜಮುಖಿ ಕಾರ್ಯಗಳು ಇಂದು ನಮ್ಮಲ್ಲಿ ಧಾರ್ಮಿಕ ಜಾಗೃತಿಯನ್ನು ಮೂಡಿಸುವಲ್ಲಿ ಯಶಸ್ವಿಯಾಗಿವೆ. ಬಹುತೇಕ ನಾಡಿನ ಎಲ್ಲಾ ಮಠಮಾನ್ಯಗಳಲ್ಲಿ ನಿರಂತರ ಸೇವಾಕಾರ್ಯಗಳ ಮೂಲಕ ಜನರ ವಿಶ್ವಾಸವನ್ನು ಗಳಿಸುವಲ್ಲಿ ಯಶಸ್ವಿಯಾಗಿದ್ದು, ಜನರಲ್ಲಿ ಮೂಡಿರುವ ಧಾರ್ಮಿಕ ಭಾವನೆಗಳು ನಮ್ಮೆಲ್ಲರ ಬದುಕಿಗೆ ಶ್ರೀರಕ್ಷೆಯಾಗಿವೆಂದು ಸಹಾಯಕ ಪ್ರಾಧ್ಯಾಪಕ ಡಾ.ಜಿ.ವಿ.ರಾಜಣ್ಣ ತಿಳಿಸಿದರು.

ಅವರು, ತಾಲ್ಲೂಕಿನ ನಾಗಗೊಂಡನಹಳ್ಳಿ ತಪೋಭೂಮಿಯಲ್ಲಿ ಷಣ್ಮುಖಶಿವಯೋಗಿಗಳ ಕುರಿತು ಉಪನ್ಯಾಸಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಚಿತ್ರದುರ್ಗದ ಮುರುಘರಾಜೇಂದ್ರ ಬೃಹನ್ಮಠದಿಂದ ಹಮ್ಮಿಕೊಂಡಿದ್ದ ಅನುಭಾವಶ್ರಾವಣಿಚಿಂತನಮಾಲೆಯ ಅಂಗವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಪುಣ್ಯನದಿ ವೇದಾವತಿಯ ತೀರದಲ್ಲಿ ಚಲುಮೆರುದ್ರಸ್ವಾಮಿಯವರು ಸಮಾಧಿಯಾಗುವ ಮೂಲಕ ಈ ಭೂಮಿಯನ್ನು ತಪೋಭೂಮಿಯನ್ನಾಗಿ ಪರಿವರ್ತಿಸಿದ್ದಾರೆ. ಇಂದಿಗೂ ಸಹ ಸಾವಿರಾರು ಭಕ್ತರು ಇಲ್ಲಿಗೆ ಭೇಟಿ ನೀಡಿ ಸ್ವಾಮಿಗಳ ಗದ್ದಿಗೆಯ ದರ್ಶನವನ್ನು ಪಡೆದು ಪಾವನರಾಗುತ್ತಾರೆ. ಪ್ರತಿಯೊಬ್ಬ ವ್ಯಕ್ತಿಯಲ್ಲಿ ಧಾರ್ಮಿಕ ಜಾಗೃತಿ ಮೂಡಿದಾಗಮಾತ್ರ ನಮ್ಮ

## ಪ್ರಮುಖ ಸುದ್ದಿ

### ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ 1847ನೇ ಮದ್ಯವರ್ಜನ ಶಿಬಿರ

# ಕುಡಿತದಿಂದ ಬದುಕು ನಾಶತಪ್ಪಿಸಲು ಶಿಬಿರ ಸಹಕಾರಿ

» ಚಳ್ಳಕೆರೆ



ಉತ್ತಮ ಬದುಕನ್ನು ರೂಪಿಸಿಕೊಳ್ಳಬೇಕಾದ ಸಂದರ್ಭದಲ್ಲಿ ಕುಡಿತದಂತಹ ಚಟಯಗಳಿಗೆ ಬಲಿಯಾಗಿ ಇಡೀ ಸಂಸಾರವೇ ಬೀದಿಪಾಲಾಗಿ ಬದುಕು ಬೇಸರವಾಗುವ ಸ್ಥಿತಿ ತಲುತ್ತದೆ. ಸಾಮಾನ್ಯವಾಗಿ ಮನೆಯಲ್ಲಿ ಎಲ್ಲಾ ಜವಾಬ್ದಾರಿಯನ್ನು ಪೂರೈಸುವ ಮನೆಯಜಮಾನನೇ ಕುಡಿತಕ್ಕೆ ದಾಸನಾದರೆ ಅಂತಹ ಮನೆ ಏಳಿಗೆಯಾಗಲು ಸಾಧ್ಯವಿಲ್ಲ. ಕುಡಿತದಿಂದ ನಾವು ಸರ್ವನಾಶದತ್ತ ಸಾಗುತ್ತಿದ್ದೇವೆಂಬ ಭಯ ನಮ್ಮನ್ನು ಕಾಡುತ್ತಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ ತಿಳಿಸಿದರು.

ಅವರು, ನಗರದ ಆದಿನಾಥ ಜೈನಮಂದಿರದಲ್ಲಿ ಶ್ರೀಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಮ್ಮಿಕೊಂಡಿದ್ದ 1847ನೇ ಮದ್ಯವರ್ಜನ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಕುಡಿತವನ್ನು ರೂಢಿಸಿಕೊಂಡುಬಂದ ವ್ಯಕ್ತಿ ಅದರಿಂದ ದೂರವಾಗಲು ಸಾಧ್ಯವಾಗುವುದಿಲ್ಲ ಎಂಬ ಪರಿಸ್ಥಿತಿ ನಿರ್ಮಾಣವಾಗುತ್ತದೆ.ಕುಡುಕರನ್ನು ಸರಿದಾರಿಗೆ ತರುವುದು ಸುಲಭದ ಮಾತಲ್ಲ, ಕುಡಿತಬಿಟ್ಟರೆ ಮಾತ್ರ ಕುಡುಕರ ಸಂಸಾರ ಆನಂದಸಾಗರವಾಗುತ್ತದೆ. ಇದನ್ನು ಮನಗಂಡ ಪೂಜ್ಯ ಹೆಗ್ಗಡೆಯವರು ಇಂತಹ ಶಿಬಿರದ ಮೂಲಕ ರಾಜ್ಯದ ಸಾವಿರಾರು ಜನರಿಗೆ ಶಿಬಿರಗಳ ಮೂಲಕ ಇಂತಹ ಚಟದಿಂದ ದೂರವಿರುವಂತೆ ಮಾಡಿದ್ದಾರೆ. ಅವರ ಕಾರ್ಯ ಶ್ಲಾಘನೀಯ, ಕುಡಿತವನ್ನು ತ್ಯಜಿಸಿ ಬದುಕು ರೂಪಿಸಿಕೊಂಡ ಸಾವಿರಾರು ಜನರು ಇಂದಿಗೂ ಸಮಾಜಕ್ಕೆ ಆದರ್ಶಪ್ರಾಯರಾಗಿದ್ದಾರೆಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಜಿಲ್ಲಾ ನಿರ್ದೇಶಕ ವಿನಯ್‌ಕುಮಾರ್‌ಸುವರ್ಣ, ಹೆಸರೇ ಹೇಳುವಂತೆ ಮದ್ಯವರ್ಜನ ಎಂದರೆ ಮದ್ಯದ ಚಟದಿಂದ ದೂರ ಉಳಿಯುವುದು. ಇಂತಹ ಶಿಬಿರಗಳನ್ನು ಹಮ್ಮಿಕೊಳ್ಳುವ ಸಂದರ್ಭದಲ್ಲಿ ಎಲ್ಲರೂ ಸೇರಿಚರ್ಚಿಸಿ ಕುಡಿತದ ದಾಸರಾದವರನ್ನು ಪತ್ತೆ ಹೆಚ್ಚಿ ಅವರಿಗೆ ಸೂಕ್ತ ಮಾರ್ಗದರ್ಶನ ಮಾಡಲಾಗುವುದು. ಪ್ರಾರಂಭದಲ್ಲಿ ಇಂತಹ ಶಿಬಿರ ನಡೆಸುವುದರಿಂದ ಉಪಯೋಗವಿಲ್ಲವೆಂದು ಅಪಸ್ವರವೆತ್ತಿದವರೇ ಇದರ ಯಶಸ್ಸನ್ನು ಕಂಡು ಪುಳಕಿತರಾಗಿದ್ದಾರೆ. ಮದ್ಯವರ್ಜನ ಶಿಬಿರದಿಂದ ಲಯತಪ್ಪಿದ ಬದುಕಿಗೆ ಭದ್ರವಾದ ಭವಿಷ್ಯ ರೂಪಿಸಿಕೊಂಡ ನೂರಾರು ಕುಟುಂಬಗಳು ಇಂದಿಗೂ ನಮ್ಮ ಮಧ್ಯದಲ್ಲಿವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಾಲ್ವೆಂಟ್ ಪ್ರಕಾಶ್, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಲವಾರು ಜನಪ್ರಿಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದಲ್ಲದೆ, ಕುಡಿತದ ಚಟಕ್ಕೆ ಬಲಿಯಾದವರಿಗೆ ಮಾರ್ಗದರ್ಶನ ನೀಡಿ ಕುಡಿತವನ್ನು ತ್ಯಜಿಸಲು ಪ್ರೇರಣೆ ನೀಡುತ್ತಾರೆ. ಕುಡಿತದಿಂದ ಆಗುವ ಅನೇಕ ಕೆಟ್ಟಪರಿಣಾಮಗಳ ಬಗ್ಗೆ ಮನವರಿಕೆ ಆದಕೂಡಲೇ ಕುಡಿತಕ್ಕೀಡಾದವರು ಇದರಿಂದ ದೂರ ಉಳಿಯಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಾರೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಮಿತಿ ಸದಸ್ಯರಾದ ನೇತಾಜಿಪ್ರಸನ್ನ, ವಿಷ್ಣುಮೂರ್ತಿರಾವ್, ತಾಲ್ಲೂಕು ಯೋಜನಾಧಿಕಾರಿ ಶಶಿಕಲಾ, ಬಿ.ಎಂ.ಭಾಗ್ಯಮ್ಮ, ದೊಡ್ಡರಂಗಪ್ಪ, ಕಿಶೋರ್‌ಶೆಟ್ಟಿ, ಬಿ.ಪರೀದ್‌ಖಾನ್, ಪಿಎಸ್‌ಐ ಜೆ.ಶಿವರಾಜ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಮೀನುಗಾರಿಕೆ ಇಲಾಖೆ: ವಿವಿಧ ಯೋಜನೆಗಳಿಗೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಮೀನುಗಾರಿಕೆ ಇಲಾಖೆ ವತಿಯಿಂದ 2024–25ನೇ ಸಾಲಿನಲ್ಲಿ ಜಿಲ್ಲಾವಲಯ ಮತ್ತು ರಾಜ್ಯವಲಯ ಯೋಜನೆಯಡಿ ಫಲಾನಭವಿ ಆಧಾರಿತ ಯೋಜನೆಗಳಾದ ಬಾವಿ ಮತ್ತು ಹೊಂಡಗಳಿಗೆ ಉಚಿತ ಮೀನುಮರಿ ಸರಬರಾಜು, ಮೀನುಮರಿ ಖರೀದಿಗೆ ಸಹಾಯ, ಮೀನು ಮಾರಾಟಕ್ಕೆ ದ್ವಿಚಕ್ರ ವಾಹನ ಖರೀದಿಗೆ ಸಹಾಯ, ಮೀನುಗಾರಿಕೆ ಸಲಕರಣೆ ಕಿಟ್ಟು ಪಡೆಯಲು ಸಹಾಯ ಇತ್ಯಾದಿ ಯೋಜನೆಗಳಲ್ಲಿ ಪ್ರಯೋಜನ ಪಡೆಯಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು ಅಗತ್ಯ ದಾಖಲಾತಿಗಳೊಂದಿಗೆ ತಾಲ್ಲೂಕುಮಟ್ಟದ ಕಚೇರಿಗೆ, ಸೇವಾಸಿಂಧು ಮೂಲಕ ಅರ್ಜಿ ಸಲ್ಲಿಸಬಹುದು. ಅಕ್ಟೋಬರ್ 30 ಅರ್ಜಿ ಸಲ್ಲಿಸಲು ಕಡೆಯ ದಿನ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಮೀನುಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ವಿದ್ಯಾರ್ಥಿವೇತನಕ್ಕೆ ಅರ್ಜಿ

» **ಚಿತ್ರದುರ್ಗ**

2024–25ನೇ ಸಾಲಿಗೆ ರಾಜ್ಯ ವಿದ್ಯಾರ್ಥಿ ವೇತನ ತಂತ್ರಾಂಶದಲ್ಲಿ (ಎಸ್‌ಎಸ್‌ಪಿ ಪೋರ್ಟಲ್) ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಜಿಲ್ಲೆಯ ವ್ಯಾಪ್ತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳು ತಾವುಗಳು ವ್ಯಾಸಂಗ ಮಾಡುತ್ತಿರುವ ಕಾಲೇಜು, ಶಿಕ್ಷಣ ಸಂಸ್ಥೆಗಳ ಮುಖಾಂತರ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನಕ್ಕಾಗಿ ವೆಬ್‌ಸೈಟ್ https://ssp.postmatric.karnata.gov.in ಮತ್ತು ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ https://ssp.postmatric.karnataka.gov.in/ssppre/ ನಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಹ ವಿಕಲಚೇತನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ಆಯಾ ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರು ಅಥವಾ ಗ್ರಾಮ ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳಲು ಕೋರಿದೆ. ಹೆಚ್ಚಿನ ಮಾಹಿತಿಗಾಗಿ, ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿದೊದ್ದೇಶ ಪುನರ್ವಸತಿ ಕಾರ್ಯಕರ್ತರ ದೂರವಾಣಿ ಸಂಖ್ಯೆ ಚಿತ್ರದುರ್ಗ–9880821934, ಚಳ್ಳಕೆರೆ–9611266930, ಹಿರಿಯೂರು–9902888901, 9902898901, ಹೊಳಲ್ಕೆರೆ–9740030227, ಹೊಸದುರ್ಗ–9741829990, ಮೊಳಕಾಲ್ಮೂರು–9742725576, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಯ ದೂರವಾಣಿ ಸಂಖ್ಯೆ 08194–235284 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

### ಅನಾಮಧೇಯ ವ್ಯಕ್ತಿ ಶವ: ವಾರಸುದಾರರ ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಆಸ್ಪತ್ರೆಯ ಮುಖ್ಯ ದ್ವಾರದ ಪಕ್ಕದ ಮರದ ಕೆಳಗೆ ಸುಮಾರು 35–40 ವರ್ಷದ ಅನಾಮಧೇಯ ಗಂಡಸಿನ ಶವ ಪತ್ತೆಯಾದ ಕುರಿತು ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ಆಗಸ್ಟ್ 25 ರಂದು ಪ್ರಕರಣ ದಾಖಲಾಗಿದೆ.ಅನಾಮಧೇಯ ವ್ಯಕ್ತಿಯು 5.6 ಅಡಿ ಎತ್ತರ, ಕೋಲು ಮುಖ, ಗೋಧಿ ಮೈಬಣ್ಣ, ತೆಳು ಶರೀರ, ತಲೆಯಲ್ಲಿ ಕಪ್ಪು ಬಿಳಿ ಮಿಶ್ರಿತ ಕೂದಲು ಹಾಗೂ ಕುರುಚಲು ಗಡ್ಡ, ಎಡಗೈ ಮೇಲೆ ಸುಚಿತ್ರ ಎಂಬ ಹಚ್ಚೆ ಇರುತ್ತದೆ. ಚೌಕವುಳ್ಳ ಬಾದಾಮಿ ಬಣ್ಣದ ತುಂಬು ತೋಳಿನ ಅಂಗಿ, ಚೌಕವುಳ್ಳ ನೀಲಿ ಬಣ್ಣದ ಪಂಚೆ, ನೀಲಿ ಬಣ್ಣದ ಕಾಚಾ ಧರಿಸಿರುತ್ತಾರೆ. ಮೃತ ಅನಾಮಧೇಯ ಪುರುಷನ ಹೆಸರು, ವಿಳಾಸ, ಗುರುತು ಪತ್ತೆಯಾದಲ್ಲಿ ಎಸ್.ಪಿ ದೂರವಾಣಿ ಸಂಖ್ಯೆ 9480803101, ಅಪರ ಅಧೀಕ್ಷಕರ ಸಂಖ್ಯೆ 9480803101, ನಗರ ಠಾಣೆ ಪಿಐ ಸಂಖ್ಯೆ 9480803146, ಜಿಲ್ಲಾ ಕಂಟ್ರೋಲ್ ರೂಂ ಸಂಖ್ಯೆ 9480803100, 08194–222782 ಗೆ ಸಂಪರ್ಕಿಸಬಹುದು ಎಂದು ತಿಳಿಸಿದೆ.

### ಅಪರ್ಣಾ ಜಿಲ್ಲಾ ಪ್ರವಾಸ

» **ದಾವಣಗೆರೆ**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ಆಯೋಗದ ಸದಸ್ಯರಾದ ಶ್ರೀಮತಿ ಅಪರ್ಣಾ ಎಂ ಕೊಳ್ಳಾ ಅವರು ಆಗಸ್ಟ್ 31 ಮತ್ತು ಸೆಪ್ಟೆಂಬರ್ 1 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಆ.31 ರಂದು ಬೆಳಿಗ್ಗೆ 9.30 ರಿಂದ ಮಧ್ಯಾಹ್ನ 1.30 ರವರೆಗೆ ಶಾಲೆ, ವಸತಿ ನಿಲಯ, ಅಂಗನವಾಡಿ ಕೇಂದ್ರ, ಮಕ್ಕಳ ಪಾಲನಾ ಸಂಸ್ಥೆಗೆ ಭೇಟಿ ನೀಡಿ ಪರಿಶೀಲನೆ ನಡೆಸುವರು.




ಬದುಕಿನ ಪಯಣದಲ್ಲಿ ಇದೇ ಕೊನೆಯ ನಿಲ್ದಾಣವಲ್ಲ ಅಥವಾ ಇದೇ ಅಂತಿಮ ಸತ್ಯವಲ್ಲ.......

ಯೂಟ್ಯೂಬ್ ಮತ್ತು ಕೆಲವು ಸಾಮಾಜಿಕ ಜಾಲತಾಣಗಳು...........

ಮಾತು – ಅಭಿಪ್ರಾಯ – ಪ್ರಚೋದನೆ – ಪರಿಣಾಮ – ಸತ್ಯ – ವಾಸ್ತವ – ಭ್ರಮೆ – ಗೊಂದಲಗಳ ನಡುವೆ..........

ಸಮೂಹ ಸಂಪರ್ಕ ಮಾಧ್ಯಮಗಳ ಕ್ರಾಂತಿಯಿಂದ ಉಂಟಾಗುತ್ತಿರುವ ತಲ್ಲಣಗಳು ಒಂದೇ ಎರಡೇ....

ಅಬ್ಬಬ್ಬಾ ಎಷ್ಟೊಂದು ಜನರ ಎಂಥೆಂತ ಮಾತಿನ ತುಣುಕುಗಳು.....

ಊಟದಿಂದ ರೋಗಗಳ ವರೆಗೆ.....

ಹಾಗಾದರೆ ಭಾಷಣ ಅಥವಾ ಮಾತುಗಳು ಎಂಬುದು ಕಲೆಯೋ ? ಕೊಲೆಯೋ ?

ಕೆಲವರಿಗೆ ಅದು ಕಲೆಯ ಬಲೆಯಾದರೆ ಮತ್ತೆ ಕೆಲವರಿಗೆ ಕೊಲೆಯ ಬಲೆಯಾಗಿರುವುದನ್ನು ಗಮನಿಸಬಹುದು.

ಕೇಳುಗರು, ನೋಡುಗರು, ಪ್ರೇಕ್ಷಕರು, ಶ್ರೋತೃಗಳು, ವೀಕ್ಷಕರು, ಆಲಿಸುವವರು ಹೀಗೆ ನಾನಾ ಹೆಸರುಗಳಿಂದ ಕರೆಯಲಾಗುವ ಜನರನ್ನು ತಮ್ಮ ಮಾತುಗಳ ಮುಖಾಂತರ ಅವರ ಮನಸ್ಸುಗಳನ್ನು ಪ್ರವೇಶಿಸಿ ಅದರ ಮೇಲೆ ನಿಯಂತ್ರಣ ಸಾಧಿಸಿ ಹೇಳಬೇಕಾದ ವಿಷಯವನ್ನು ಸ್ಪಷ್ಟವಾಗಿ ಮತ್ತು ನೇರವಾಗಿ ತಮ್ಮ ಕ್ರಿಯಾತ್ಮಕ ಚಿಂತನೆಯಿಂದ ಅವರಲ್ಲಿ ಅಚ್ಚು ಹೊತ್ತಿದಂತೆ ಮೂಡಿಸಿ ಅವರನ್ನೂ ಯೋಚಿಸುವಂತೆ ಪ್ರೇರೇಪಿಸಿ ಅವರಲ್ಲಿ ಜ್ಞಾನದ ಬೆಳಕನ್ನು ಚೆಲ್ಲಿ ಅರಿವಿನ ಆಳ ಹೆಚ್ಚಿಸಿ ವೈಯಕ್ತಿಕವಾಗಿ ಮತ್ತು ಸಾಮಾಜಿಕವಾಗಿ ಅವರಲ್ಲಿ ಸ್ಫೂರ್ತಿ ತುಂಬಿ ಬದಲಾವಣೆಗೆ ಅವರನ್ನು ಸಜ್ಜುಗೊಳಿಸುವಂತೆ ಮಾಡುವ ಪ್ರತಿಭಾವಂತ ಪ್ರಾಮಾಣಿಕ ಭಾಷಣಕಾರರನ್ನು ನೋಡಿದ್ದೇವೆ ಮತ್ತು ಕೇಳಿದ್ದೇವೆ. ಇದನ್ನೇ ಅದ್ಭುತ ಭಾಷಣ ಕಲೆ ಎನ್ನಬಹುದು.




ಹಾಗೆಯೇ,

ತಮ್ಮ ಭಾಷಣಗಳಿಂದ ಜನರನ್ನು ಪ್ರಚೋದಿಸಿ, ಅವರುಗಳನ್ನು ಭಾವನಾತ್ಮಕವಾಗಿ ಉದ್ರೇಕಿಸಿ, ಪದಗಳು, ವಾಕ್ಯಗಳು, ಉದಾಹರಣೆಗಳು, ಸಂಕೇತಗಳು, ಅವಾಸ್ತವಿಕ ಅಂಶಗಳು, ಹೇಳುವ ಶೈಲಿಯ ಮುಖಾಂತರ ಅವರನ್ನು ವಂಚಿಸಿ, ಅವರಿಂದಲೇ ಸಮಾಜದಲ್ಲಿ ಅಶಾಂತಿ ಅಸಹನೆ ಸೃಷ್ಟಿಸಿ ದೊಂಬಿ ಗಲಭೆಗಳನ್ನು ಎಬ್ಬಿಸಿ ಜನರ ಮತ್ತು ಸಮಾಜದ ಸಾವು ನೋವುಗಳಿಗೆ ಕಾರಣವಾಗುವಂತ ಭಾಷಣಕಾರರನ್ನು ಸಹ ನಾವು ನೋಡುತ್ತಿದ್ದೇವೆ.

ಧಾರ್ಮಿಕ ಮತ್ತು ರಾಜಕೀಯ ನಾಯಕರುಗಳ ಜೊತೆಗೆ, ಕೆಲವು ನಕಲಿ ದೇಶ ಭಕ್ತರು ಮತ್ತು ನಕಲಿ ಬುದ್ದಿ ಜೀವಿಗಳು ಈ ರೀತಿಯ ಮಾತಿನ ಕಲೆಯನ್ನು ಕೊಲೆಯಾಗಿಸುವ ಸಾಮರ್ಥ್ಯ ಹೊಂದಿದ್ದಾರೆ.

ದೇವರ ಪ್ರತಿನಿಧಿಗಳಂತೆ, ಧರ್ಮಗಳ ವಕ್ತಾರರಂತೆ, ದೇಶದ ಉದ್ದಾರಕರಂತೆ,

ಜನಗಳ ರಕ್ಷಕರಂತೆ,

ಮಾತಿನಲ್ಲಿಯೇ ಅರಮನೆ ಕಟ್ಟಿ, ಸುಳ್ಳುಗಳ ಬಣ್ಣ ಹೊಡೆದು, ವಂಚನೆಯ ದೀಪ ಹಚ್ಚಿ ಜನರನ್ನು ಎಲ್ಲಾ ಕಾಲಕ್ಕೂ ಶೋಷಿಸಿಕೊಂಡು ಬರುತ್ತಿದ್ದಾರೆ.

ಕೇವಲ ಭಾಷಣಗಳಿಂದಲೇ ಅಧಿಕಾರಕ್ಕೇರುವ, ಆಶ್ವಾಸನೆಗಳಿಂದಲೇ ಅದನ್ನು ಉಳಿಸಿಕೊಳ್ಳುವ, ಮಾತುಗಳಿಂದಲೇ ಜನರನ್ನು ಮರುಳು ಮಾಡುವ ಹೃದಯಹೀನ ನಾಯಕ ವರ್ಗ ಸೃಷ್ಟಿಯಾಗಿದೆ.

ನಾವುಗಳು ಎಚ್ಚೆತ್ತುಕೊಳ್ಳದಿದ್ದರೆ, ಮಾತುಗಳೇ ಕಲೆಗೆ ಬದಲಾಗಿ ಕೊಲೆಗೆ ದಾರಿಯಾಗಿ ಮುಂದೆ ಹೃದಯದ ಭಾಷೆಯೇ ನಿರ್ನಾಮವಾಗಿ ಬುದ್ದಿಯ ಭಾಷೆ ತನ್ನ ನಿಯಂತ್ರಣ ಸಾಧಿಸಿ ನಮ್ಮನ್ನು ವಿನಾಶದ ಅಂಚಿಗೆ ತಳ್ಳುತ್ತದೆ.

ಗೆಳೆಯರೆ, ದಯವಿಟ್ಟು ಮಾತಿನ ಮೋಡಿಗಾರರ ಸೆಳೆತಕ್ಕೆ ಒಳಗಾಗದೆ, ನಿಜವಾದ ಕೆಲಸಗಾರರನ್ನು ಎಲ್ಲಾ ಕ್ಷೇತ್ರಗಳಲ್ಲೂ ಪ್ರೋತ್ಸಾಹಿಸೋಣ.

ಯೂಟ್ಯೂಬ್ ಗಳಲ್ಲಿ ಅಥವಾ ಬೇರೆ ಯಾವುದೇ ಮಾಧ್ಯಮಗಳಲ್ಲಿ ಕಾಣಸಿಗುವ ಮಾತಿನ ಮೋಡಿಯ ತುಣುಕುಗಳನ್ನು ನೋಡಿ ಕ್ಷಣಿಕ ಭಾವಕತೆಗೆ ಒಳಗಾಗಿ ಯಾವುದೇ ತೀರ್ಮಾನ ಕೈಗೊಳ್ಳಬೇಡಿ.

ವಿವೇಚನೆ ಮತ್ತು ಸ್ವತಂತ್ರ ತೀರ್ಮಾನ ನಿಮ್ಮದಾಗಿರಲಿ.

ಏಕೆಂದರೆ ಮಾತಿನ ಮೋಡಿಯಲ್ಲಿ ಸತ್ಯ ಸಮಾಧಿಯಾಗಿ ಸುಳ್ಳು ವಿಜೃಂಭಿಸಲು ಬಿಡಬಾರದು. ಮುಂದಿನ ಪೀಳಿಗೆಯ ಮಕ್ಕಳಿಗೆ ಮಾತು ಮತ್ತು ಕೃತಿಗಳ ನಡುವಿನ ಅಂತರದ ಮಹತ್ವವನ್ನು ತಿಳಿ ಹೇಳುವ ಜವಾಬ್ದಾರಿ ನಮ್ಮದು. ಇಲ್ಲದಿದ್ದರೆ ಮಾತುಗಳೇ ಮಕ್ಕಳ ಭವಿಷ್ಯಕ್ಕೆ ಮುಳ್ಳಾಗುವ ಸಾಧ್ಯತೆ ಇದೆ......

ಒಳ್ಳೆಯದು – ಕೆಟ್ಟದ್ದು – ವಿಕೃತಗಳ ನಡುವಿನ ವ್ಯತ್ಯಾಸ ಗುರುತಿಸುವ ಸೂಕ್ಷ್ಮತೆ ನಮ್ಮದಾಗಲಿ.


ಇದನ್ನು ನಿಯಂತ್ರಿಸಲು – ನಿಗ್ರಹಿಸಲು ಸಾಧ್ಯವಿಲ್ಲ. ಆದರೆ ನಾವು ವಿವೇಚನೆ ಬೆಳೆಸಿಕೊಳ್ಳಲು ಸಾಧ್ಯವಿದೆ.

ಎಚ್ಚರವಿರಲಿ..........

ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,

ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,

ಮನಗಳಲ್ಲಿ – ಮನೆಗಳಲ್ಲಿ – ಮತಗಳಲ್ಲಿ – ಪರಿವರ್ತನೆಗಾಗಿ,



» **ಲೇಖನ**
**ವಿವೇಕಾನಂದ. ಹೆಚ್.ಕೆ.**
**9844013068**

## ಪ್ರಮುಖ ಸುದ್ದಿ

### ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿಯಲ್ಲಿ ಪಪಂ ಅಧ್ಯಕ್ಷೆ ಟಿ.ಮಂಜುಳ ಶ್ರೀಕಾಂತ್ ಹೇಳಿಕೆ

# ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿ ಬೆಳಸಿಕೊಳ್ಳುವುದು ಅಗತ್ಯ

» **ನಾಯಕನಹಟ್ಟಿ**

ಇಂದಿನ ಆಧುನಿಕ ಯುಗದಲ್ಲಿ ವಿದ್ಯಾರ್ಥಿಗಳು ಸ್ಪರ್ಧೆ ಎದುರಿಸಿ ಬದುಕು ಕಟ್ಟಿಕೊಳ್ಳುವುದರ ಜತೆಗೆ ಸಾಮಾಜಿಕ ಕಳಕಳಿ ಬೆಳೆಸಿಕೊಳ್ಳುವುದು ಅಗತ್ಯವಾಗಿದೆ ಎಂದು ಪಟ್ಟಣ ಪಂಚಾಯತಿ ಅಧ್ಯಕ್ಷೆ ಟಿ.ಮಂಜುಳ ಶ್ರೀಕಾಂತ್ ಹೇಳಿದರು.

ಪಟ್ಟಣದ ಎಸ್.ಟಿ.ಎಸ್.ಆರ್ ಪ್ರೌಢಶಾಲೆಯಲ್ಲಿ ಶುಕ್ರವಾರ ನಡೆದ ಪ್ರೌಢಶಾಲೆ ವಿದ್ಯಾರ್ಥಿಗಳ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ, ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಲ್ಲಿರುವ ಪ್ರತಿಭೆ ಹೊರತರಲು ಶಿಕ್ಷಕರು ಮತ್ತು ಪೋಷಕರು ಪ್ರತಿಭಾ ಕಾರಂಜಿಯಂತಹ ವೇದಿಕೆಗಳನ್ನು ಸಮರ್ಥವಾಗಿ ಬಳಸಿಕೊಂಡು ಉತ್ಸಾಹದಿಂದ ಪಾಲ್ಗೊಳ್ಳಬೇಕು. ಈಗಾಗಲೇ ಸರ್ಕಾರ ಶಾಲಾ ಮಕ್ಕಳ ಸರ್ವತೋಮುಖ ಅಭಿವೃದ್ಧಿಗೆ ಪ್ರತಿಭಾ ಕಾರಂಜಿ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನುಅನುಷ್ಠಾನಗೊಳಿಸಿದೆ. ಮಕ್ಕಳು ತಮ್ಮಲ್ಲಿರುವ ಕಲೆ, ಸಾಹಿತ್ಯ,



ಜಾನಪದ ಪ್ರಾಕಾರದ ಪ್ರತಿಭೆಯನ್ನು ತೋರಿ ಸಾಂಸ್ಕೃತಿಕವಾಗಿ ಮುಂದೆ ಬರಬೇಕು ಎಂದರು.

ಪ್ರತಿಯೊಂದು ಮಗುವಿನಲ್ಲೂ ಒಂದಲ್ಲ ಒಂದು ರೀತಿಯ ಸಾಂಸ್ಕೃತಿಕ ಪ್ರತಿಭೆ ಇದ್ದೇ ಇರುವುದು. ಅದನ್ನು ಗುರುತಿಸಿ ಅನಾವರಣ ಮಾಡುವ ಮೂಲಕ ಮಕ್ಕಳು ಸರ್ವಾಂಗೀಣ ಬೆಳವಣಿಗೆ ಸಾಧಿಸಲು ಅವಕಾಶ ಕಲ್ಪಿಸಬೇಕು. ಸೋಲು, ಗೆಲುವಿನ ಬಗ್ಗೆ ಯೋಚಿಸದೆ ಸ್ಪರ್ಧೆಗಳಲ್ಲಿ ಎಲ್ಲ ವಿದ್ಯಾರ್ಥಿಗಳು ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ಶಿಕ್ಷಣ ಮಕ್ಕಳ ವಿದ್ಯಾರ್ಜನೆಗೆ ಮಾತ್ರ ಸೀಮಿತವಾಗಿರದೆ ಅವರಲ್ಲಿನ ಪ್ರತಿಭೆ ಹೊರಹಾಕಿ ವಿಕಾಸ ಹೊಂದಲು ಸಹಾಯ ಮಾಡುವುದು. ಇಂದು ಗುಣಮಟ್ಟದ ಶಿಕ್ಷಣ ನೀಡುವಲ್ಲಿ ಎಡುವುತ್ತಿದ್ದು, ಜೀವನದಲ್ಲಿ ಅಳವಡಿಸಿಕೊಳ್ಳಬೇಕಾದ ರೀತಿ–ನೀತಿಗಳು ಮತ್ತು ಮಾನವೀಯ ಮೌಲ್ಯಗಳು ಮರೆಯಾಗುತ್ತಿವೆ. ಮಕ್ಕಳಲ್ಲಿ ಇಂತಹ ಗುಣಗಳನ್ನು ಬೆಳೆಸುವ ಪಠ್ಯಕ್ರಮ ರೂಪುಗೊಳ್ಳಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಎಸ್.ಟಿ.ಎಸ್.ಆರ್.ಪ್ರೌಢ ಶಾಲಾ ಕಾರ್ಯದರ್ಶಿ ಎಂ.ವೈ.ಟಿ.ಸ್ವಾಮಿ ಮಾತನಾಡಿ, ಪೋಷಕರಿಗೆ ತಮ್ಮ ಮಕ್ಕಳು ಪ್ರತಿಭೆಯನ್ನು ಗುರುತಿಸಲು ಸಾಧ್ಯವಾಗುವುದಿಲ್ಲ.

ಈ ಕೆಲಸವನ್ನು ಶಿಕ್ಷಕರು ತಮ್ಮ ಮಕ್ಕಳಲ್ಲಿನ ಪ್ರತಿಭೆಯನ್ನು ಗುರುತಿಸುವ ಕೆಲಸವಾಗಬೇಕು. ಇಂದಿನ ಮಕ್ಕಳು ಪರೀಕ್ಷೆ ಮತ್ತು ಅಂಕಗಳಿಗೆ ಮಾತ್ರ ಅಧ್ಯಯನ ಸೀಮಿತವಾಗಿದೆ ಎಂಬ ಮನೋಭಾವನೆಯನ್ನು ಬೆಳಸಿಕೊಂಡಿರುತ್ತಾರೆ.

ಇದನ್ನು ದಾಟಿ ಜ್ಞಾನಕ್ಕಾಗಿ ಓದು ಎಂಬ ನಿಟ್ಟಿನಲ್ಲಿ ಬೆಳೆಯಬೇಕು. ಶಿಕ್ಷಕರು ಮಕ್ಕಳ ಪ್ರತಿಭೆ ವೀಕ್ಷಿಸಿ ಯಾವುದೇ ತಾರತಮ್ಯವಿಲ್ಲದೇ ತೀರ್ಪು ನೀಡಬೇಕು ಎಂದರು.

ಈ ಸಂದರ್ಭದಲ್ಲಿ ಎಸ್.ಟಿ.ಎಸ್.ಆರ್ ಶಾಲೆಯ ಉಪ ಪ್ರಾಚಾರ್ಯ ಬಿ.ರಮೇಶ್, ಸಿ.ಆರ್.ಪಿ ಈಶ್ವರಪ್ಪ, ಮುಖ್ಯಶಿಕ್ಷಕರಾದ ಸುಜಾತ, ಹನುಮಂತಯ್ಯ, ಉಮಾ ಮಹಂ□□ನಾಯಕ, ಶಿಕ್ಷಕರಾದ ಫಣಿಂದ್ರಕುಮಾರ್, ಸುರೇ□□ಬಾಬು, ಕೆ.ಟಿ.ನಾಗಭೂಷಣ್ ಉಪಸ್ಥಿತರಿದ್ದರು

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T